ಕನ್ನಡಪ್ರಭ
ಬುಧವಾರ 6.05.2026

ಗರಿಷ್ಠ 40°c | ಕನಿಷ್ಠ 24°c

ಸುದ್ದಿ ಸಿಂಚನ

ಕಸಾಪ 112ನೇ ಸಂಸ್ಥಾಪನಾ ದಿನಾಚರಣೆ



ವಿಜಯಪುರ: ತಾಲೂಕಿನ ನಾಗಠಾಣ ಗ್ರಾಮದ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನ ಆಚರಿಸಲಾಯಿತು. ಈ ವೇಳೆ ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ, ಕಾರ್ಯದರ್ಶಿ ಸುನಂದಾ ಹುಣಶ್ಯಾಳ, ಶಿಕ್ಷಕರಾದ ಶಿಕ್ಷಕ ಸಂತೋಷ ಬಂಡೆ, ರೇಣುಕಾ ಭಜಂತ್ರಿ, ಸಂಗೀತಾ ಅಂಕಲಗಿ, ವೀರೇಶ ಹುಣಶ್ಯಾಳ, ಪಾಲಕರು ಹಾಗೂ ಮಕ್ಕಳು ಭಾಗವಹಿಸಿದ್ದರು.

ಆಕ್ಷೇಪಣೆ ಸಲ್ಲಿಸುವ ಅವಧಿ ಮೇ 8ರ ವರೆಗೆ ವಿಸ್ತರಣೆ

ವಿಜಯಪುರ: ರಾಜ್ಯದ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿ 2026 ಏಪ್ರಿಲ್ 18ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಹೊರಡಿಸಲಾದ ಕರಡು ಪ್ರಕಟಣೆಗೆ ಸಾರ್ವಜನಿಕರು ಆಕ್ಷೇಪಣೆ ಸಲ್ಲಿಸಲು ಮೇ 8ರ ಸಂಜೆ 5.30ರ ವರೆಗೆ ಅವಧಿ ವಿಸ್ತರಿಸಲಾಗಿದೆ.

ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯ ಕುರಿತಂತೆ, ಸ್ವೀಕರಿಸಿದ ಆಕ್ಷೇಪಣೆ, ಅಹವಾಲುಗಳ ಅದಾಲತ್ ಮೇ 13ರಂದು ಮಧ್ಯಾಹ್ನ 2.30 ರಿಂದ ಸಂಜೆ 5ರ ವರೆಗೆ ಬೆಂಗಳೂರಿನ ಬಹುಮಹಡಿಗಳ ಕಟ್ಟಡ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗೇಟ್-ನಂ-2, 2ನೇ ಮಹಡಿಯಲ್ಲಿ ನಡೆಯಲಿದೆ. ಜಿಲ್ಲೆಯ ಸಾರ್ವಜನಿಕರು ಈ ಅದಾಲತ್ ನಲ್ಲಿ ಭಾಗವಹಿಸಬಹುದಾಗಿದೆ. ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿದವರು ಅದಾಲತ್ ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ, ತಮ್ಮ ಆಧಾರ್, ಗುರುತಿನ ಚೀಟಿ ಅಥವಾ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯೊಂದಿಗೆ ಹಾಜರಾಗಬಹುದಾಗಿದೆ ಎಂದು ಪಂಚಾಯತ್ ರಾಜ್ ಇಲಾಖೆ ಪ್ರಕಟಣೆ ಹೊರಡಿಸಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಬಿಎಲ್‌ಡಿಇ ಆಸ್ಪತ್ರೆಗೆ ಮೃತ ವ್ಯಕ್ತಿಯ ದೇಹದಾನ



ವಿಜಯಪುರ: ಜಿಲ್ಲೆಯಲ್ಲಿ ದೇಹದಾನದ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಹೆಚ್ಚಾಗುತ್ತಿದ್ದು, ಏಪ್ರಿಲ್ 30ರಂದು ನಿಧನರಾದ ಬಸವನ ಬಾಗೇವಾಡಿ ತಾಲೂಕಿನ ದಿಂಡವಾರ ಗ್ರಾಮದ ಅಣ್ಣಪ್ಪಾ ಗುರುಸಿದ್ದಪ್ಪಗೌಡ ಪಾಟೀಲ (73) ಇಚ್ಛೆಯಂತೆ ಕುಟುಂಬ ಸದಸ್ಯರು ಪಾರ್ಥಿವ ಶರೀರವನ್ನು ಬಿ.ಎಲ್.ಡಿ.ಇ ಆಸ್ಪತ್ರೆಗೆ ದಾನ ಮಾಡಿದ್ದಾರೆ. ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಆಸ್ಪತ್ರೆಯ ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಆರ್.ಎಸ್.ಬುಲಗೌಡ ಅವರು ಪಾರ್ಥಿವ ಶರೀರ ಸ್ವೀಕರಿಸಿ ಕುಟುಂಬ ಸದಸ್ಯರಿಗೆ ಕೃತಜ್ಞತೆ ಸಲ್ಲಿಸಿದರು.

ಜಲಾಶಯ ಮಟ್ಟ

ಆಲಮಟ್ಟಿ

- ಗರಿಷ್ಠ ಮಟ್ಟ....................519.60ಮೀ.
- ಇಂದಿನ ಮಟ್ಟ.................509.59ಮೀ.
- ಒಳಹರಿವು.........................ಇಲ್ಲ
- ಹೊರಹರಿವು....................3,727ಕ್ಯು

ರೈತ ಸಂಘದ ಪದಾಧಿಕಾರಿಗಳ ಆಯ್ಕೆ



ಅಖಂಡ ಕರ್ನಾಟಕ ರೈತ ಸಂಘದ ವಿಜಯಪುರ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ರಾಜ್ಯ ಸಮೀತಿಗೆ ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಸಂಘದ ರಾಜ್ಯ ಪ್ರಧಾನಕಾರ್ಯದರ್ಶಿ ಅರವಿಂದ ಕುಲಕರ್ಣಿ ಶಾಲು ಹೊದಿಸಿ ಪ್ರಮಾಣ ವಚನ ಭೋದಿಸಿದರು.

• **ಕನ್ನಡಪ್ರಭ ವಾರ್ತೆ** ವಿಜಯಪುರ

ಅಖಂಡ ಕರ್ನಾಟಕ ರೈತ ಸಂಘದ ವಿಜಯಪುರ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ರಾಜ್ಯ ಸಮಿತಿಯಲ್ಲಿ ಆಯ್ಕೆಯಾದ ಉಮೇಶ ವಾಲೀಕಾರ ಇವರಿಗೆ ಆದೇಶಪತ್ರ ನೀಡುವ ಮೂಲಕ ವಿವಿಧ ಜಿಲ್ಲಾ ಪದಾಧಿಕಾರಿಗಳನ್ನು ಹಾಗೂ ನೂತನ ಕೊಲ್ಹಾರ ತಾಲೂಕು ಘಟಕದ ಪದಾಧಿಕಾರಿಗಳನ್ನು ರೈತ ಸಂಘದ ಜಿಲ್ಲಾ ಘಟಕದಿಂದ ನಗರದ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಲ್ಲಿ ನಡೆದ ಸಭೆಯಲ್ಲಿ ಈ ಕೆಳಕಂಡ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ಆದೇಶ ಪತ್ರ ನೀಡುವ ಮೂಲಕ ನೇಮಕ ಮಾಡಲಾಯಿತು.

ಸಂಘದ ರಾಜ್ಯ ಪ್ರಧಾನಕಾರ್ಯದರ್ಶಿ ಅರವಿಂದಕುಲಕರ್ಣಿನೂತನಪದಾಧಿಕಾರಿಗಳಿಗೆ ಶಾಲು ಹೊದಿಸಿ ಪ್ರಮಾಣ ವಚನ ಭೋದಿಸಿದರು. ಜಿಲ್ಲಾ ಪ್ರಧಾನಕಾರ್ಯದರ್ಶಿಯಾಗಿ ಮುಳವಾಡ ಗ್ರಾಮದ ಬಸವರಾಜ ಸಿದ್ದಾಪುರ, ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಗುರುರಾಜ ಪಡಶೆಟ್ಟಿ ಹಾಗೂ ಕೊಲ್ಹಾರ ತಾಲೂಕಿನ ನೂತನ ತಾಲೂಕಾ ಪದಾಧಿಕಾರಿಗಳಾಗಿ ಸಂಗಮೇಶ ವಿಜಾಪುರ ತಾಲೂಕಾ ಪ್ರಧಾನಕಾರ್ಯದರ್ಶಿಯಾಗಿ ನೇಮಕ ಮಾಡಲಾಯಿತು. ಕೊಲ್ಹಾರತಾಲೂಕಿನಸಂಘಟನಾಕಾರ್ಯದರ್ಶಿ ಈರಣ್ಣಬೀಳಗಿ, ಕೊಲ್ಹಾರತಾಲೂಕುಸಂಚಾಲಕ ನಿಲೇಶ ಕುರುವಿನಶೆಟ್ಟಿ, ತಾಲೂಕಾ ಉಪಾಧ್ಯಕ್ಷರಾಗಿ ಸಂಗನಗೌಡ ಪಾಟೀಲರನ್ನು ಆಯ್ಕೆ ಮಾಡಲಾಯಿತು.ಬಸವನ ಬಾಗೇವಾಡಿ ತಾಲೂಕಿನ ಕಾನ್ನಾಳ ಗ್ರಾಮದ ಸಿದ್ದು ಹಿರೇಮಠ ಅವರನ್ನು ಸಾಮಾಜಿಕ ಜಾಲ ತಾಣದ ಸಂಚಾಲಕರನ್ನಾಗಿ ನೇಮಿಸಲಾಯಿತು. ಸಂಘದ ತತ್ವ ಸಿದ್ಧಾಂತಗಳ ಅಡಿ ಕಾರ್ಯನಿರ್ವಹಿಸಬೇಕೆಂದು ಹಾಗೂ ಸಂಘಟನೆ ಬಲಪಡಿಸುವುದು ಯಾವುದೇ ರೀತಿ ಸಂಘಕ್ಕೆ ಚ್ಯುತಿ ಬರದಂತೆ ನಡೆದುಕೊಂಡು ಹೋಗಬೇಕೆಂದರು.ಉಮೇಶವಾಲೀಕಾರ ಇದ್ದರು.



ರಾಷ್ಟ್ರೀಯ ನಿರ್ಣಾಯಕರಾಗಿ ಬಸವರಾಜ ಆಯ್ಕೆ

ವಿಜಯಪುರ: ಅಂಡರ್‌ಆರ್ಮ್ ಕ್ರಿಕೆಟ್ ಸಂಸ್ಥೆಯ ವತಿಯಿಂದ ಮಹಾರಾಷ್ಟ್ರದ ನಾಸಿಕ್‌ನಲ್ಲಿ ನಡೆದ ರಾಷ್ಟ್ರೀಯ ನಿರ್ಣಾಯಕರ ತರಬೇತಿ ಪರೀಕ್ಷೆಯಲ್ಲಿ ವಿಜಯಪುರದ ಬಸವರಾಜ ಬಾಗೇವಾಡಿಯವರು ಭಾಗವಹಿಸಿ, ಉತ್ತೀರ್ಣಗಿದ್ದಾರೆ. ಅಷ್ಟೆಯಲ್ಲದೆ, ರಾಜ್ಯದ ಮೊದಲ ರಾಷ್ಟ್ರೀಯ ನಿರ್ಣಯಕರಾಗಿ ಆಯ್ಕೆಯಾಗಿದ್ದಾರೆ ಎಂದು ರಾಜ್ಯ ಸಂಸ್ಥೆಯ ಅಂಡರ್‌ಆರ್ಮ್ ಕ್ರಿಕೆಟ್ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ನಿಂಗದಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಸಿಲಾಘಾತ: ಆಸ್ಪತ್ರೆಯಲ್ಲಿ 10 ಬೆಡ್ ಸನ್ನದ್ಧ

ಜನರು ತಂಪು ಪಾನೀಯ, ಉದ್ಯಾನ ವನಗಳ ಮೊರೆ | ಹೀಟ್ ಸ್ಟ್ರೋಕ್ ವಾರ್ಡ್ ಆರಂಭ

• **ಶಶಿಕಾಂತ ಮೆಂಡೆಗಾರ**
ಕನ್ನಡಪ್ರಭ ವಾರ್ತೆ ವಿಜಯಪುರ

ವಾತಾವರಣದಲ್ಲಿ ದಿನದಿಂದ ದಿನಕ್ಕೆ ಏರುತ್ತಲೇ ಇರುವ ತಾಪಮಾನ ಈ ಬಾರಿ ಜಿಲ್ಲೆಯ ಜನರನ್ನು ಬಿಸಿಲಾಘಾತಕ್ಕೆ ದೂಡಲಿದೆಯಾ ಎಂಬ ಚಿಂತೆ ಶುರುವಾಗಿದೆ. ಇದೀಗ ವಿಜಯಪುರದಲ್ಲಿ ಗರಿಷ್ಠ ತಾಪಮಾನ 40.5 ಡಿಗ್ರಿಗೆ ತಲುಪಿದ್ದು, 2019ರಲ್ಲಿ ದಾಖಲಾಗಿದ್ದ 43 ಡಿಗ್ರಿ ಸೆಲ್ಸಿಯಸ್ ಅನ್ನೂ ಮೀರಿಸಲಿದೆಯಾ ಎಂಬ ಆತಂಕ ಕಾಡುತ್ತಿದೆ.

ಈ ಭಯದ ಬೆನ್ನಲ್ಲೇ ಜಿಲ್ಲೆಯ ಜನರು ತಂಪು ಪಾನೀಯಗಳು ಹಾಗೂ ಗಾರ್ಡನ್‌ಗಳ ಮೊರೆ ಹೋಗಿದ್ದಾರೆ. ಇನ್ನೊಂದೆಡೆ ಜಿಲ್ಲಾಸ್ಪತ್ರೆಯಲ್ಲಿ ಹೀಟ್ ಸ್ಟ್ರೋಕ್ ವಾರ್ಡ್ ಕೂಡ ಸಿದ್ಧವಾಗಿದೆ. ಯಾವಾಗ ಯಾರಿಗೆ ಸನ್ ಸ್ಟ್ರೋಕ್ ಸಂಭವಿಸಲಿದೆಯೋ ಎಂಬ ಚಿಂತೆ ಜಿಲ್ಲೆಯ ಜನರದ್ದಾಗಿದೆ. ಹಿಟ್ನಹಳ್ಳಿಯ ಪ್ರಾದೇಶಿಕ ಕೃಷಿ ಸಂಶೋಧನಾ ಕೇಂದ್ರದಲ್ಲಿರುವ ಕೃಷಿಹವಾಮಾನಶಾಸ್ತ್ರದ ಇಲಾಖೆಯಲ್ಲಿ ದಾಖಲಾದ ತಾಪಮಾನ ಬೆಚ್ಚಿ ಬೀಳಿಸಿದೆ.

ಜಿಲ್ಲಾಸ್ಪತ್ರೆಯಲ್ಲಿ ಹೀಟ್ ಸ್ಟ್ರೋಕ್ ವಾರ್ಡ್ ಆರಂಭ:ಬಸವನಾಡು, ಬಿಸಿಲನಾಡು, ಗುಮ್ಮಟ ನಗರಿ ಎನಿಸಿಕೊಂಡಿರುವ ವಿಜಯಪುರ ಜಿಲ್ಲೆಯಲ್ಲಿ ಮಿತಿಮೀರಿದ ಉಷ್ಣಾಂಶ ದಾಖಲಾಗುತ್ತಿರುವುದರಿಂದ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆಗಳು ಮುಂಜಾಗ್ರತಾ ಕ್ರಮ ಕೈಗೊಂಡಿವೆ. ಇದಕ್ಕಾಗಿಯೇ ಜಿಲ್ಲಾಸ್ಪತ್ರೆಯಲ್ಲಿ 10 ಬೆಡ್‌ಗಳುಳ್ಳ ಹೀಟ್ ಸ್ಟ್ರೋಕ್ ವಾರ್ಡ್ ಆರಂಭಿಸಲಾಗಿದೆ. ಸನ್ ಸ್ಟ್ರೋಕ್ (ಶಾಖಾಘಾತ) ದಿಂದ ಬಂದವರಿಗೆ ತಕ್ಷಣ ಚಿಕಿತ್ಸೆ ನೀಡಲು ಇಲ್ಲಿ ಸಕಲ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ.



ಕಳೆದ 14 ವರ್ಷಗಳ ಅಂಕಿಸಂಖ್ಯೆಯನ್ನು ನೋಡುವುದಾದರೆ ಪ್ರತಿ ಬಾರಿಯೂ ಬೇಸಿಗೆಯಲ್ಲಿ ಗರಿಷ್ಠ 40 ಡಿಗ್ರಿ ತಾಪಮಾನ ಸಾಮಾನ್ಯವಾಗಿದೆ. ಆದರೆ 2019ರ ಮೇ ತಿಂಗಳ ಕೊನೆಯಲ್ಲಿ ಮಾತ್ರ 43 ಡಿಗ್ರಿಗೆ ತಲುಪಿತ್ತು. ಆದರೆ ಈ ಬಾರಿ ಏಪ್ರಿಲ್ ಕೊನೆಯ ವಾರದಲ್ಲೇ 40 ಡಿಗ್ರಿ ಕ್ರಾಸ್ ಆಗಿರುವುದರಿಂದ ಈ ವರ್ಷವೂ 43 ಡಿಗ್ರಿಗೂ ಮೀರಿ ತಾಪಮಾನ ಏರಲಿದೆಯಾ ಎಂಬ ಲೆಕ್ಕಾಚಾರಗಳು ಶುರುವಾಗಿವೆ. ಇನ್ನೂ ಒಂದೂವರೆ ತಿಂಗಳು ಬೇಸಿಗೆಕಾಲ ಇರುವುದಿಂದ ನಿತ್ಯ ಅರ್ಧ ಡಿಗ್ರಿಯಷ್ಟು ತಾಪಮಾನ ಹೆಚ್ಚಾಗುತ್ತಿರುವುದು ಜನರ ಆತಂಕಕ್ಕೆ ಕಾರಣವಾಗಿದೆ.

ಯಾವ ವರ್ಷ ಎಷ್ಟು ಗರಿಷ್ಠ ತಾಪಮಾನವಿತ್ತು?: ತಾಲೂಕಿನ ಹಿಟ್ನಹಳ್ಳಿಯಲ್ಲಿನ ಪ್ರಾದೇಶಿಕ ಕೃಷಿ ಸಂಶೋಧನಾ ಕೇಂದ್ರದಲ್ಲಿರುವ ಕೃಷಿ ಹವಾಮಾನಶಾಸ್ತ್ರದ ಅಖಿಲ ಭಾರತ ಸಮನ್ವಿತ ಸಂಶೋಧನಾ ಯೋಜನೆಯ ಕಚೇರಿಯು ಕಳೆದ 15 ವರ್ಷಗಳ ಗರಿಷ್ಠ ತಾಪಮಾನದ ಕೋಷ್ಟಕವನ್ನು ಬಿಡುಗಡೆ ಮಾಡಿದೆ. ಇದರಲ್ಲಿ ಯಾವ ವರ್ಷ ಎಷ್ಟು ಗರಿಷ್ಠ ತಾಪಮಾನವಿತ್ತು ಎಂಬುದನ್ನು ಈ ಕೋಷ್ಟಕದಲ್ಲಿ ನೋಡಬಹುದಾಗಿದೆ.

2012 ಮೇ 20ರಂದು 41 ಡಿಗ್ರಿ, 2013 ಮೇ 22ರಂದು 40.8 ಡಿಗ್ರಿ, 2014 ಮೇ 26ರಂದು 40.8 ಡಿಗ್ರಿ, 2015 ಮೇ 22ರಂದು 42.2 ಡಿಗ್ರಿ, 2016 ಮೇ 14ರಂದು 41.2 ಡಿಗ್ರಿ, 2017 ಮೇ 26ರಂದು 41.5 ಡಿಗ್ರಿ, 2018 ಮೇ 2ರಂದು 42 ಡಿಗ್ರಿ, 2019 ಮೇ 30ರಂದು 43 ಡಿಗ್ರಿ, 2020 ಮೇ 27ರಂದು 42.5 ಡಿಗ್ರಿ, 2021 ಮೇ 11ರಂದು 38 ಡಿಗ್ರಿ, 2022 ಮೇ 10ರಂದು 41.5 ಡಿಗ್ರಿ, 2023 ಮೇ 19ರಂದು 40.6 ಡಿಗ್ರಿ, 2024 ಮೇ 7ರಂದು 42.5 ಡಿಗ್ರಿ, 2025 ಮೇ 7ರಂದು 42.5 ಡಿಗ್ರಿ, 2026 ಮೇ 2ರಂದು 40.5 ಡಿಗ್ರಿ ಗರಿಷ್ಠ ತಾಪಮಾನ ದಾಖಲಾಗಿದೆ.

ವರ್ಷದಿಂದ ವರ್ಷಕ್ಕೆ ವಿಜಯಪುರ ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗುತ್ತಿದ್ದು, ಈ ಬಾರಿ ಮಾರ್ಚ್ 5ರಿಂದಲೇ ಜಿಲ್ಲಾಸ್ಪತ್ರೆಯಲ್ಲಿ 10 ಹಾಸಿಗೆಗಳುಳ್ಳ ಹೀಟ್ ಸ್ಟ್ರೋಕ್ ವಾರ್ಡ್ ಆರಂಭಿಸಲಾಗಿದೆ. ಈ ವಾಡ್‌ರ್‌ನಲ್ಲಿ ಬಿಸಿಲಿನ ಆಘಾತದಿಂದ ಬಂದವರಿಗೆ ತುರ್ತು ಚಿಕಿತ್ಸೆ ನೀಡಲು ಬೇಕಾದ ಆಕ್ಸಿಜನ್, ವೆಂಟಿಲೇಟರ್, ಮೂವರು ವೈದ್ಯರು, ಸಿಬ್ಬಂದಿ ಸೇರಿದಂತೆ ಸಕಲ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಬಿಸಿಲಿಗೆ ನಿತ್ರಾಣಗೊಳ್ಳುವುದು, ತಲೆ ತಿರುಗುವುದು, ದೇಹದಲ್ಲಿ ನೀರಿನ ಅಂಶ ಕಡಿಮೆಯಾಗುವುದು ಆಗುವ ಸಂಭವವಿದೆ. ಈಗಾಗಲೇ ತಾಪಮಾನ 40 ಡಿಗ್ರಿ ದಾಟಿರುವುದರಿಂದ ಜಿಲ್ಲಾಸ್ಪತ್ರೆಯಲ್ಲಿ 24 ಗಂಟೆಗಳ ಸೇವೆಯನ್ನು ಒದಗಿಸಲಾಗಿದ್ದು, ಸಮಸ್ಯೆಗೊಳಗಾದವರು ತಕ್ಷಣ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಬಹುದಾಗಿದೆ.

• **ಡಾ.ಶಿವಾನಂದ ಮಾಸ್ತಿಹೊಳಿ**
ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾಸ್ಪತ್ರೆ.



ಬಿಸಿಲಿನ ತಾಪದಿಂದ ಕೈಗೊಳ್ಳಬೇಕಾದ ಕ್ರಮಗಳು

ಇಂತಹ ಮೈ ಸುಡುವ ಬಿಸಿಲಿನಲ್ಲಿ ಯಾರೂ ಹೊರಗೆ ತಿರುಗಾಡದೆ ನೆರಳಿನಲ್ಲೇ ಇರಬೇಕು. ಮೈಮೇಲೆ ತೆಳುವಾದ ಕಾಟನ್ ಬಟ್ಟೆ ಧರಿಸಬೇಕು ಜೊತೆಗೆ ಕಾಲಕಾಲಕ್ಕೆ ನೀರು, ಮಜ್ಜಿಗೆ, ಅಂಬಲಿ ಸೇರಿದಂತೆ ದೇಹವನ್ನು ತಂಪಾಗಿಸುವ ಪಾನೀಯಗಳನ್ನು ಕುಡಿಯಬೇಕು. ಬೆಳಗ್ಗೆ 10ರಿಂದ ಸಂಜೆ 5ರ ವರೆಗೆ ಮಕ್ಕಳು, ವೃದ್ಧರು ಮನೆಯಿಂದ ಹೊರಗೆ ಬರಬಾರದು. ಅನಿವಾರ್ಯವಾದವರು ಟೋಪಿ ಹಾಕಿಕೊಳ್ಳಬೇಕು, ಕೊಡೆಗಳನ್ನು ಬಳಸುವುದು, ವಸ್ತ್ರಗಳಿಂದ ಮುಖ ಮುಚ್ಚಿಕೊಳ್ಳಬೇಕು.

ಪೋಷಕರಿಗೆ ₹ 25,000 ದಂಡ ವಿಧಿಸಿದ ಸಂಚಾರಿ ಪೊಲೀಸರು!

ಅಪ್ರಾಪ್ತ ಬೈಕ ಚಾಲನೆ ಹಿನ್ನೆಲೆ | ನ್ಯಾಯಾಧೀಶರಿಂದ ಆದೇಶ

ಸಾಂದರ್ಭಿಕ ಚಿತ್ರ



• **ಕನ್ನಡಪ್ರಭ ವಾರ್ತೆ** ವಿಜಯಪುರ

2026 ಮೇ 2ರಂದು ನಗರದ ಸೋಲಾಪುರ ರಸ್ತೆಯಲ್ಲಿನ ಪಾಟೀಲ ಪ್ಲಾನೆಟ್ ಬಳಿ ದ್ವಿಚಕ್ರ ವಾಹನ (ಕೆಎ-28 ವಾಯ್-2868) ನಂಬರಿನ ಸ್ಕೂಟಿ ಚಲಾಯಿಸುವಾಗ ಸಂಚಾರಿ ಠಾಣೆ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದ ಅಪ್ರಾಪ್ತ ಬಾಲಕನ ಪೋಷಕರಿಗೆ ವಿಜಯಪುರದ ಸಿಜೆಎಮ್ ನ್ಯಾಯಾಲಯದ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ₹ 25ಸಾವಿರ ದಂಡ ವಿಧಿಸಿ ಆದೇಶಿಸಿದ್ದಾರೆ.

ಅಪ್ರಾಪ್ತ ಬಾಲಕ ಸ್ಕೂಟಿ ಚಲಾಯಿಸುತ್ತಿದ್ದಾಗ ಸಿಕ್ಕಿಬಿದ್ದಿದ್ದ ಬಾಲಕನ ಪೋಷಕರ ಮೇಲೆ ಸಂಚಾರಿ ಠಾಣೆ ಅಧಿಕಾರಿಗಳು ಅಪ್ರಾಪ್ತ ವಯಸ್ಸಿನ ಬಾಲಕನಿಗೆ ವಾಹನವನ್ನು ಚಲಾಯಿಸಲು ನೀಡಿದ ಬಗ್ಗೆ ವಿಜಯಪುರ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಲಯ ಮೇ 04ರಂದು ಅಪ್ರಾಪ್ತ ವಯಸ್ಸಿನ ಬಾಲಕನ ಪೋಷಕರಿಗೆ ₹ 25,000 ದಂಡ ಹಾಗೂ ಒಂದು ವರ್ಷದವರೆಗೆ ವಾಹನದ ನೋಂದಣಿ ರದ್ದುಪಡಿಸಿ ಆದೇಶಿಸಿದೆ. ಆದ್ದರಿಂದ ಪಾಲಕರು ಅಪ್ರಾಪ್ತ ಮಕ್ಕಳಿಗೆ ವಾಹನ ಚಲಾವಣೆಗೆ ನೀಡಬಾರದು ಹಾಗೂ ಸಾರ್ವಜನಿಕರು ಎಲ್ಲಾ ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ವಿಜಯಪುರ ಎಸ್‌ಪಿ ಲಕ್ಷ್ಮಣ ನಿಂಬರಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭಿವೃದ್ಧಿ ಕಾಮಗಾರಿಗೆ ಚಾಲನೆ



• **ಕನ್ನಡಪ್ರಭ ವಾರ್ತೆ** ವಿಜಯಪುರ

ನಗರದಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಚಾಲನೆ ನೀಡಿದರು.

ಬೆಳಗ್ಗೆ 10 ಗಂಟೆಗೆ ಗೋಲಗುಂಬಜ್ ನಿಂದ ಹಕೀಮ್ ಚೌಕ್ ವರೆಗೆ ₹ 2 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು. ಬಳಿಕ ವಾರ್ಡ್ ನಂ.18 ರಲ್ಲಿ ₹ 2 ಕೋಟಿ ವೆಚ್ಚದಲ್ಲಿ ಪರಿಶಿಷ್ಟ ವರ್ಗಗಳ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಹಾಗೂ ಹರಣಶಿಕಾರಿ ಓಣಿಯಲ್ಲಿ ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಿದರು. ಅಲ್ಲಿಂದ ನೇರವಾಗಿ ಕಾಸಗೇರಿ ಖಾದಿ ಗ್ರಾಮೋದ್ಯೋಗ ಮಾರ್ಗವಾಗಿ ಮುಬೀನ್ ಸರ್ಕಲ್ ಅಥಣಿ ಗಲ್ಲಿ ಮುಖಾಂತರ ಕೇಂದ್ರ ಬಸ್ ನಿಲ್ದಾಣದ ವರೆಗೆ ಒಳಚರಂಡಿ, ಮಳೆ ನೀರು ಚರಂಡಿ, ಅಲಂಕಾರಿಕ ಬೀದಿ ದೀಪ ಅಳವಡಿಸಿ ರಸ್ತೆ ಅಭಿವದ್ಧಿಪಡಿಸುವ ಕಾಮಗಾರಿಗೆ ಚಾಲನೆ ನೀಡಿದರು. ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ, ವಿಡಿಎ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ, ಮಹಾಪೌರ ಎಂ.ಎಸ್.ಕರಡಿ, ಪಾಲಿಕೆ ಸದಸ್ಯರು, ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿ ಅಧಿಕಾರಿಗಳು ಹಾಗೂ ಸಾರ್ವಜನಿಕರು ಇದ್ದರು.

ಜಿಲ್ಲಾ ಜಾಗೃತಿ ಸಮಿತಿ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

ವಿಜಯಪುರ: 2025-26ನೇ ಸಾಲಿನಲ್ಲಿ ಹೊಸದಾಗಿ ಸಫಾಯಿ ಕರ್ಮಚಾರಿಗಳ ನಿಯೋಜನೆ ನಿಷೇಧ ಹಾಗೂ ಪುನರ್ವಸತಿ ಕಾಯ್ದೆ 2013 ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ರಚಿಸಲು, ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಂದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಅರ್ಜಿ ಆಹ್ವಾನಿಸಿದೆ.

ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾಗಲು ಬಯಸುವವರು ಸಫಾಯಿ ಕರ್ಮಚಾರಿಗಳ ಪುನರ್ವಸತಿಗಾಗಿ ಕೆಲಸ ಮಾಡುತ್ತಿರುವ ಸಂಘಟನೆಗಳಿಗೆ ಸೇರಿದವರಾಗಿದ್ದು, ಜಿಲ್ಲಾ ಮಟ್ಟದಲ್ಲಿ ವಾಸಿಸುವ ಸಮುದಾಯವನ್ನು ಪ್ರತಿನಿಧಿಸುತ್ತಿರುವ 04 ಜನ ಮೀರದಂತೆ ಸಾಮಾಜಿಕ ಕಾರ್ಯಕರ್ತರು, ಅವರಲ್ಲಿ ಇಬ್ಬರು ಮಹಿಳೆಯರು ಇರತಕ್ಕದ್ದು. ಒಟ್ಟು 04 ಜನ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಲಾಗುವುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ತಿಳಿಸಿದ್ದಾರೆ.

ಈ ಸಮಿತಿಗೆ ಸದಸ್ಯರಾಗ ಬಯಸುವ ಎಸ್ಸಿ, ಎಸ್ಟಿ ಅಭ್ಯರ್ಥಿಗಳು ಮೇ 10ರ ಮಧ್ಯಾಹ್ನ 1.30ರ ಒಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ವಿಜಯಪುರ ಅವರ ಕಚೇರಿಯಿಂದ ಮೇ 5ರೊಳಗಾಗಿ ಪಡೆದುಕೊಳ್ಳಬಹುದಾಗಿದೆ ಎಂದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಥೋತ್ಸವ... | ಕೊಂಡಗೂಳಿ ಗ್ರಾಮದಲ್ಲಿ ಸಿದ್ಧಾರೂಢರ ಜಾತ್ರಾ ಮಹೋತ್ಸವ

ಉಡಿ ತುಂಬುವುದು ದೇಶದ ಸಂಸ್ಕೃತಿ: ಡಾ.ಸಂಧ್ಯಾ

• **ಕನ್ನಡಪ್ರಭ ವಾರ್ತೆ** ದೇವರಹಿಪ್ಪರಗಿ

ಉಡಿ ತುಂಬುವ ಪದ್ಧತಿ ಭಾರತೀಯ ಸಂಸ್ಕೃತಿ ಯ ಪ್ರತೀಕ. ಇಂತಹ ಸಂಪ್ರದಾಯವನ್ನು ಇಂದಿಗೂ ಪಾಲಿಸಿಕೊಂಡು ಬಂದಿರುವುದು ಹೆಮ್ಮೆಯ ಸಂಗತಿ. ತಾಯಂದಿರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಬೇಕು ಎಂದು ಸಿಂದಗಿ ಖ್ಯಾತ ವೈದ್ಯೆ ಡಾ.ಸಂಧ್ಯಾ ಮನಗೂಳಿ ಹೇಳಿದರು.

ತಾಲೂಕಿನ ಕೊಂಡಗೂಳಿ ಗ್ರಾಮದ ಸಿದ್ಧಾ ರೂಢರ ಜಾತ್ರಾ ಮಹೋತ್ಸವ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯ ಕ್ರಮದಲ್ಲಿ ಮಾತನಾಡಿದರು.

ನಮ್ಮ ಕುಟುಂ ಬವು ಸಿದ್ಧಾರೂಢರ ಭಕ್ತರು, ಶ್ರೀಗಳ ಆಜ್ಞೆ ಪಾಲಿಸುತ್ತಾ ಬಂದಿದ್ದೇವೆ. ಗ್ರಾಮದಲ್ಲಿ ಮಹಿ ಳೆಯರಿಗೆ ಉಡಿ ತುಂಬುವ ಮೂಲಕ ನಮ್ಮ ಸಂಪ್ರದಾಯ ಹಾಗೂ ಅದರ ಮಹತ್ವದ ಬಗ್ಗೆ ಮಹಿಳೆಯರಿಗೆ ಅರಿವು, ಜಾಗೃತಿ ಮೂಡಿಸುವ ಕೆಲಸ ಉತ್ತಮವಾಗಿದೆ ಎಂದರು.

ಮಹಿಳೆಯರನ್ನು ಒಗ್ಗೂಡಿಸುವದರ ಜೊತೆ ದೇವರ ಧ್ಯಾನ ಹಾಗೂ ಬದುಕಿನ ಜಂಜಾಟದ ನಡುವೆ ಎಲ್ಲರೂ ಒಟ್ಟಿಗೆ ಸೇರಿ ಆಚರಿಸುವ ಕೆಲಸ ಅತ್ಯಂತ ಪುಣ್ಯದ ಕಾಯಕವಾಗಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಬೀದರ, ಕೊಂಡಗೂಳಿ ಸಿದ್ಧಾರೂಢ ಮಠದ ಶಂಕ್ರಾನಂದ ಮಹಾ ಸ್ವಾಮೀಜಿ ಮಾತನಾಡಿ, ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರಿಗೆ ಪೂಜ್ಯನೀಯ ಸ್ಥಾನ ನೀಡಲಾಗಿದೆ ಎಂದರು.



ನಮ್ಮ ದೇಶದಲ್ಲಿರುವಷ್ಟು ಮಹಿಳಾ ಪ್ರಧಾನ (ದೇವತೆಗಳ) ದೇವಾಲಯ ಗಳು ವಿಶ್ವದ ಯಾವುದೇ ರಾಷ್ಟ್ರಗಳಲ್ಲಿಲ್ಲ ಎಂದರು. ಸಾನಿಧ್ಯವನ್ನು ಕೊಕಟನೂರ ಗದ್ದುಗಿ ಮಠದ ಮಡಿವಾಳೇಶ್ವರ ಸ್ವಾಮೀಜಿ ವಹಿಸಿದ್ದರು. ಉಡಿ ತುಂಬುವ ಕಾರ್ಯಕ್ರಮ ಮಹಾಂತಯ್ಯ ಹಿರೇಮಠ ನೆರವೇರಿಸಿದರು. ಪ್ರವಚನಕಾರರಾಗಿ ಚಿಕ್ಕರೂಗಿ ಗ್ರಾಮದ ಈರಣ್ಣ ಶಾಸ್ತ್ರಿ ಮಾತನಾಡಿದರು. ಗ್ರಾಮದ ಪ್ರಮುಖರು, ಗಣ್ಯರು ಹಾಗೂ ಶ್ರೀಮಠದ ಭಕ್ತರು ಇದ್ದರು.

ಮಹಿಳೆಯರಿಂದ ರಥೋತ್ಸವ

ಕೊಂಡಗೂಳಿ ಗ್ರಾಮದಲ್ಲಿ ನಡೆಯುವ ಜಾತ್ರೆಯಲ್ಲಿ ಮಹಿಳೆಯರಿಗೆ ಹಚ್ಚಿನ ಪ್ರಾತಿನಿಧ್ಯ ನೀಡಲಾಗಿದೆ. ಈ ಜಾತ್ರೆಯಲ್ಲಿ ಮಹಿಳೆರದ್ದೇ ಮೇಲುಗೈ. ಮಹಿಳೆಯರೇ ಈ ಜಾತ್ರೆಯ ಕೇಂದ್ರ ಬಿಂದು. ಸಿದ್ಧಾರೂಢರ ಮಠದ ಜಾತ್ರೆಯನ್ನು ಮಹಿಳೆಯರು ಮಾಡುತ್ತಾರೆ. ಇಲ್ಲಿ ಪುರುಷರಿಗೆ ಅವಕಾಶವೇ ಇಲ್ಲ. ಸುಮಾರು 10 ವರ್ಷಗಳಿಂದಲೂ ಜಾತ್ರೆಯಲ್ಲಿ ಮಹಿಳೆಯರೆ ರಥ ಎಳೆಯುತ್ತಾರೆ. ತಮ್ಮ ಇಷ್ಟಾರ್ಥ ಸಿದ್ದಿಸಲಿ ಎಂದು ವಿಶೇಷ ಪೂಜೆ ಸಲ್ಲಿಸುತ್ತಾರೆ. ಮಂಗಳವಾರ ಬೆಳಗ್ಗೆಯಿಂದಲೇ ಜಾತ್ರೆಯಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮದ ಅಂಗವಾಗಿ ನಡೆದ ಮಹಿಳೆಯರ ಕುಂಭಮೇಳ, ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳಲ್ಲಿ ಅದ್ದೂರಿಯಾಗಿ ನಡೆದು ಶ್ರೀಮಠಕ್ಕೆ ಬಂದು ತಲುಪಿತು. ನಂತರ ಸಾಯಂಕಾಲ ನೂರಾರು ಮಹಿಳೆಯರು ಕೂಡಿ ಎಳೆಯುವ ರಥೋತ್ಸವ ನೋಡುವುದೇ ಸುಂದರ. ರಥೋತ್ಸವ ನೋಡಲು ಶ್ರೀಗಳು ಗ್ರಾಮದ ಪ್ರಮುಖರು, ಗಣ್ಯರು, ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

ಬಿಎಸ್‌ವೈ ಅಭಿಮಾನೋತ್ಸವ: ಪೂರ್ವಭಾವಿ ಸಭೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಕರ್ನಾಟಕ ಕಂಡ ಅತ್ಯಂತ ಧೀಮಂತ ರಾಜಕೀಯ ಮುತ್ಸದ್ದಿಗಳು ಬಿ.ಎಸ್.ಯಡಿಯೂರಪ್ಪನವರು. ಅವರು ಮುಖ್ಯಮಂತ್ರಿಗಳಾಗಿ ಭಾಗ್ಯಲಕ್ಷ್ಮೀ ಯೋಜನೆ, ಶಾಲಾ ಮಕ್ಕಳಿಗೆ ಸೈಕಲ್, ರೈತರಿಗಾಗಿ ಪ್ರತ್ಯೇಕ ಕೃಷಿ ಬಜೆಟ್ ಹೀಗೆ ಅಭೂತಪೂರ್ವ ಕೊಡುಗೆ ನೀಡಿದ್ದಾರೆ ಎಂದು ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಹೇಳಿದರು.



2026 ಮೇ 09ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮದ ಹಿನ್ನೆಲೆಯಲ್ಲಿ, ವಿಜಯಪುರ ನಗರ ಮಂಡಲದಿಂದ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಯಡಿಯೂರಪ್ಪನವರು ವಿಜಯಪುರ ಜಿಲ್ಲೆಗೆ ಅನೇಕ ಕೊಡುಗೆಗಳನ್ನು ಕೊಟ್ಟಿದ್ದು, ಅವರು ಅಜಾತಶತ್ರುವಾಗಿದ್ದಾರೆ, ಎಲ್ಲ ಸಮುದಾಯದ ಜನರನ್ನು ಸಮಾನರಾಗಿ ಕಂಡವರಾಗಿದ್ದರಿಂದ ಅವರ ಅಭಿಮಾನೋತ್ಸವಕ್ಕೆ ನಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸೋಣ ಎಂದು ಕಾರ್ಯಕರ್ತರಿಗೆ ಕರೆ ಕೊಟ್ಟರು.

ಮುಖಂಡರಾದ ಸುರೇಶ ಬಿರಾದಾರ, ಮಳುಗೌಡ ಪಾಟೀಲ, ಭೀಮಾಶಂಕರ ಹದನೂರ, ರಾಜು ಬಿರಾದಾರ, ಸಂದೀಪ ಪಾಟೀಲ, ಸ್ವಪ್ನಾ ಕಣಮುಚನಾಳ, ಭರತ ಕೋಳಿ, ವಿಜಯ ಜೋಶಿ, ಪಾಪುಸಿಂಗ ರಜಪೂತ, ರಾಜೇಶ ತಾವಸೆ, ಶರಣಬಸಪ್ಪ ಕುಂಬಾರ, ಅಪ್ಪು ಕುಂಬಾರ, ಜಗದೀಶ ಮುಚ್ಚಂಡಿ, ಸಂತೋಷ ಯಂಕಪ್ಪಗೂಳ, ಪ್ರಹ್ಲಾದ ಕಾಂಬಳೆ, ವಿವೇಕ ತಾವರಗೇರಿ, ಶಿವರಾಜ ಮಡಿವಾಳ, ಮಂಥನ ಗಾಯಕವಾಡ, ಭಾರತಿ ಭುಯ್ಯಾರ, ಶಾಂತಾ ಉತ್ಲಾಸಕರ, ಶಾಂತಾ ಯಳಮೇಲಿ, ಶ್ರೀದೇವಿ ಅವಧಿ, ಬಸಮ್ಮಾ ಗುಜರಿ ಹಾಗೂ ಪ್ರಿಯಾಂಕಾ ಶೇರಖಾನೆ ಪಾಲ್ಗೊಂಡಿದ್ದರು.

ಇಂದಿನ ಯುವ ಜನಾಂಗ ಎಷ್ಟೇ ಓದಿದರೂ, ಎತ್ತರದ ಸ್ಥಾನಕ್ಕೆ ಹೋದರು ವಿದ್ಯೆ ಜತೆಗೆ ವಿನಮ್ರತೆ ಇರಬೇಕು. ಆದರೆ, ಇಂದು ಹೆಚ್ಚು ವಿದ್ಯಾವಂತರಲ್ಲಿಯೇ ವಿನಮ್ರತೆ ಕಡಿಮೆಯಾಗುತ್ತಿದೆ.
• **ಡಾ.ಪ್ರಭುಸಾರಂಗದೇವ ಶಿವಾಚಾರ್ಯರು** ಸಾರಂಗಮಠ

ಸುದ್ದಿ ಸಿಂಚನ

ಸಿದ್ದು ನಾಯಕತ್ವಕ್ಕೆ ಉಪಚುನಾವಣೆ ಗೆಲುವಿನ ಗರಿ: ಡಾ.ಪ್ರಭುಗೌಡ



ದೇವರಹಿಪ್ಪರಗಿ: ನುಡಿದಂತೆ ನಡೆಯುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದತ್ತ ಮತದಾರರ ಒಲವು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ ಎಂಬುದಕ್ಕೆ ದಾವಣಗೆರೆ ದಕ್ಷಿಣ, ಬಾಗಲಕೋಟೆ ಉಪ ಚುನಾವಣೆಯಲ್ಲಿನ ಗೆಲುವೇ ಸಾಕ್ಷಿ ಎಂದು ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಲಿಂಗದಳ್ಳಿ ತಿಳಿಸಿದ್ದಾರೆ. ಪಟ್ಟಣದಲ್ಲಿ ಮಂಗಳವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ನಡೆದ ಉಪಚುನಾವಣೆಯ ಮತ ಎಣಿಕೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸುವ ಮೂಲಕ ಸರ್ಕಾರದ ಸಾಧನೆಗಳಿಗೆ ಸಾಕ್ಷಿಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಈ ಹಿಂದೆ ಯಾವ ಸರ್ಕಾರಗಳು ನೀಡದಂತಹ ಸೌಲಭ್ಯ ನೀಡಿದೆ. ಪ್ರತಿ ಪ್ರಜೆಗಳಿಗೂ ಸರ್ಕಾರದ ಒಂದಿಲ್ಲೊಂದು ಸೌಲಭ್ಯ ತಲುಪುವಂತೆ ಮಾಡಿದ್ದು ಹಾಗೂ ಸರ್ಕಾರದ ಅಭಿವೃದ್ಧಿ ಸಾಧನೆಗಳೇ ಗೆಲುವಿಗೆ ಸಾಕ್ಷಿಯಾಗಿದೆ. ಬಿಜೆಪಿ ಪಕ್ಷದವರು ಎಷ್ಟೇ ತಂತ್ರ, ಕುತಂತ್ರ ಮಾಡಿದರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಇನ್ನಷ್ಟು ಬಲಿಷ್ಠವಾಗಲಿದೆ. ಬರುವಂತ 2028ರ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸುವ ಮೂಲಕ ರಾಜ್ಯದಲ್ಲಿ ಮತ್ತೊಮ್ಮೆ ಸರ್ಕಾರ ನಡೆಸಲಿದೆ ಎಂದರು.

ಬಿ.ಎಂ.ಪಾಟೀಲ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳ ಐಸಿಎಸ್‌ಇ ಸಾಧನೆ



ವಿಜಯಪುರ: ಐ.ಸಿ.ಎಸ್.ಇ 10ನೇ ತರಗತಿ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಬಿ.ಎಲ್.ಡಿ.ಇ ಸಂಸ್ಥೆಯ ಬಿ.ಎಂ.ಪಾಟೀಲ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದಲ್ಲಿ ಮೊದಲ ಮೂರು ರ್‍ಯಾಂಕ್ ಗಳಿಸುವ ಮೂಲಕ ಕೀರ್ತಿ ತಂದಿದ್ದಾರೆ. ಶಾಲೆಯು ಶೇ.100ರಷ್ಟು ಫಲಿತಾಂಶ ದಾಖಲಿಸಿದೆ. ಶಾಲೆಯ ವಿದ್ಯಾರ್ಥಿಗಳಾದ ಗೌರಿ ಪಾಟೀಲ ಮತ್ತು ಸೂಫಿಯಾನ್ ಕಂದಗಲ ತಲಾ ಶೇ.93.20 ಅಂಕ ಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಅದೇರೀತಿಪ್ರೇಕ್ಷಾ ಪಾಟೀಲ ಶೇ.90.60 ಅಂಕ ಗಳಿಸಿ ದ್ವಿತೀಯ ಮತ್ತು ಮಲ್ಲಿಕಾರ್ಜುನ ಬಿರಾದಾರ ಶೇ.89.80 ಅಂಕ ಗಳಿಸಿ ಜಿಲ್ಲೆಗೆ ತೃತೀಯ ಸ್ಥಾನ ಗಳಿಸಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ.ಬಿ.ಪಾಟೀಲ, ಎಂಎಲ್ಸಿ ಸುನೀಲಗೌಡ ಪಾಟೀಲ, ಶಾಲೆಯ ಕೋ- ಆರ್ಡಿನೇಟರ್ ಜಯಾ ಗಲಗಲಿ ಸಂತಸ ವ್ಯಕ್ತಪಡಿಸಿದ್ದು, ಅಭಿನಂದನೆ ಸಲ್ಲಿಸಿದ್ದಾರೆ.

ಐಟಿಐ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

ವಿಜಯಪುರ: ನಗರದ ಹತ್ತು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಎನ್‌ಸಿವಿಟಿ ಸಂಯೋಜಿತ ವೃತ್ತಿಗಳಿಗೆ 2026ರ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. 10ನೇ ತರಗತಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ಸಿಐಟಿಇ ಕರ್ನಾಟಕ ಪೋರ್ಟಲ್ (www.cite.karnataka.gov.in) ಮೂಲಕ ಏ.27 ರಿಂದ ಮೇ.8ರ ವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಜಿಲ್ಲಾ ನೋಡಲ್ ಸರಕಾರಿ ಐಟಿಐ ತರಬೇತಿ ಸಂಸ್ಥೆ, 8 ಸಾಂಪ್ರದಾಯಿಕ ಹಾಗೂ 06 ಇಂಡಸ್ಟ್ರೀ-4.0 ವೃತ್ತಿಗಳಲ್ಲಿ ಒಟ್ಟು 518 ಸೀಟುಗಳು ಲಭ್ಯವಿದ್ದು. ವೆಲ್ಡರ್ ವೃತ್ತಿಗೆ 8ನೇ ಪಾಸ್, 10ನೇ ಪಾಸ್ ಹಾಗೂ ಫೇಲ್ ಅಭ್ಯರ್ಥಿಗಳೂ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಮೊ.9035434381, 9886437517, 9972682184, 9448986381,08352-280360, ಸಂಪರ್ಕಿಸಿ.

ನೌಕರಿಗಿಂತ ಕೃಷಿಗೆ ಆದ್ಯತೆ ನೀಡಿ

ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಉಪ ಕುಲಪತಿ ಡಾ.ವೈ.ಎಂ.ಜಯರಾಜ ಸಲಹೆ

• **ಕನ್ನಡಪ್ರಭ ವಾರ್ತೆ** ಸಿಂದಗಿ

ಪ್ರಸ್ತುತ ದಿನಗಳಲ್ಲಿ ಯುವಸಮೂಹ ಸರ್ಕಾರಿ ನೌಕರಿಗೆ ಹೆಚ್ಚು ಆದ್ಯತೆ ನೀಡುತ್ತಿದ್ದು, ಸ್ವ ಉದ್ಯೋಗ ಹಾಗೂ ಸ್ವಂತ ಜಮೀನಿನಲ್ಲಿ ಕಷ್ಟು ಪಟ್ಟು ಕೃಷಿ ಮಾಡಿ, ಇನ್ನು 10 ವರ್ಷಗಳಲ್ಲಿ ಭೂಮಿಗೆ ಹೆಚ್ಚು ಬೆಲೆ ಸಿಗಲಿದೆ ಎಂದು ವಿಜಯಪುರದ ಬಿ.ಎಲ್.ಡಿ.ಇ ಸ್ವಾಯತ್ತ ವಿವಿಯ ಉಪ ಕುಲಪತಿ ಡಾ.ವೈ.ಎಂ.ಜಯರಾಜ ಹೇಳಿದರು.

ಪಟ್ಟಣದ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆ, ಸಾರಂಗಮಠದ ಜಿ.ಪಿ.ಪೋರವಾಲ ಕಲಾ ವಾಣಿಜ್ಯ ಮತ್ತು ವ್ಹಿ.ವ್ಹಿ.ಸಾಲಿಮಠ ವಿಜ್ಞಾನ ಮಹಾವಿದ್ಯಾಲ ಯದಲ್ಲಿ ಮಂಗಳವಾರ ಹಮ್ಮಿಕೊಂಡ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದರು.

ಒಂದು ಕಡೆ ನೌಕರಿ ಮಾಡುತ್ತಿರುವ ಹೆಣ್ಣು ಮಕ್ಕಳು ಮದುವೆಗೆ ನಿರಾಕರಿಸುತ್ತಿದ್ದಾರೆ. ಇತ್ತ ನಿರುದ್ಯೋಗ ಯುವಕರಿಗೆ ಮದುವೆಗೆ ಹೆಣ್ಣು ಸಿಗುತ್ತಿಲ್ಲ. ಇದರಿಂದ ಜನರೇಷನ್ ಗ್ಯಾಪ್ ಆಗುತ್ತಿದೆ. ಇದು ಮುಂದೆ ಸಮಾಜಕ್ಕೆ ದೊಡ್ಡ ತಲೆನೋವಾಗಲಿದೆ ಎಂದರು.

ಮನೆಗೆ ಬಂದ ಅತಿಥಿಗಳಿಗಿಂತ, ಪಾಲಕರಿಗಿಂತ ಮೊಬೈಲ್ ಮೇಲೆಯ ಹೆಚ್ಚು ಪ್ರೀತಿಯಾಗಿದೆ. ಇದರಿಂದ ರಕ್ತ ಸಂಬಂಧ ಹಳಿಸಿ ಹೋಗುತ್ತಿದೆ. ಮಕ್ಕಳ ಕೈಯಿಂದ ಮೊಬೈಲ್ ಕಸಿದರೆ ಹೆತ್ತವರ ಮೇಲೆ, ಶಿಕ್ಷಕರ ಮೇಲೆ ಕೋಪ, ಸುಲಿಗೆ ಜೊತೆಗೆ ಮಾರಣಾಂತಿಕ ಹಲ್ಲೆಗಳು ಆಗುತ್ತಿರುವುದು ವಿಷಾದನಿಯ. ಆದಷ್ಟು ಬದುಕಿನ ಬಗ್ಗೆ ಎಚ್ಚರವಿಟ್ಟು ಬಾಳಬೇಕು ಎಂದರು.

ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಮಾತನಾಡಿ, ಇಂದಿನ ಯುವ ಜನಾಂಗ ಎಷ್ಟೇ ಓದಿದರೂ, ಎತ್ತರದ ಸ್ಥಾನಕ್ಕೆ ಹೋದರು ವಿದ್ಯೆ ಜತೆಗೆ ವಿನಮ್ರತೆ ಇರಬೇಕು. ಆದರೆ, ಇಂದು ಹೆಚ್ಚು ವಿದ್ಯಾವಂತರಲ್ಲಿಯೇ ವಿನಮ್ರತೆ ಕಡಿಮೆಯಾಗುತ್ತಿದೆ. ಐಟಿ-ಬಿಟಿ ಕಂಪನಿಗಳಲ್ಲಿ ಹೆಚ್ಚು ಓದಿದವರಿಗಿಂತ ವಿನಮ್ರತೆಯಿಂದ ಇರುವವರನ್ನು ಗುರುತಿಸುವ ಎದುರಾಗಿದೆ ಬೇಸರ ವ್ಯಕ್ತಪಡಿಸಿದರು.



ರೈತನ ಮಕ್ಕಳಿಗೆ ಮದುವೆಯಾಗಿ ನೀವು ಇನ್ನೊಬ್ಬರ ಕೈಯಲ್ಲಿ ಕೆಲಸ ಮಾಡುವುದಕ್ಕಿಂತ ನಿಮ್ಮ ಭೂಮಿಯಲ್ಲಿಯೇ ವೈಜ್ಞಾನಿಕವಾಗಿ ದುಡಿದು ಮಾಲಿಕರಾಗಿ ಎಂದು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು. ಯಾವುದೇ ಕ್ಷೇತ್ರ ವಿರಲಿ ಅಲ್ಲಿ ಶ್ರದ್ಧೆ ಮತ್ತು ಸೇವಾಮನೋಭಾವನೆಯಿಂದ ಕಾರ್ಯನಿರ್ವಹಿಸಿದರೆ ಫಲ ಸಿಗಲಿದೆ.
• **ಡಾ.ವೈ.ಎಂ.ಜಯರಾಜ,** ಉಪ ಕುಲಪತಿ, ಬಿ.ಎಲ್.ಡಿ.ಇ ಸ್ವಾಯತ್ತ ವಿವಿ, ವಿಜಯಪುರ

ಸಮ್ಮುಖ ವಹಿಸಿದ ಸಾರಂಗಮಠದ ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಮಾತನಾಡಿ, ಈ ಜಗತ್ತು ಮತ್ತೆ ಯತಾಸ್ಥಿತಿಗೆ ಬರಲಿದೆ. ವೃತ್ತಿಯಿಂದ ನಿವೃತ್ತಿಯಾದ ಬಳಿಕ ನಮ್ಮ ಗ್ರಾಮಗಳಿಗೆ ಹೋಗಿ ಮೂಲ ಕಸಬುಗಳನ್ನು ಮಾಡಬೇಕು ಅದು ನಮ್ಮ ಸಂಸ್ಕೃತಿ ಎಂದರು. ಪ್ರಾಚಾರ್ಯ ಡಿ.ಎಂ.ಸರಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಪ್ರಾಧ್ಯಾಪಕರಾದ ಬಿ.ಆರ್.ಮಹಾಜನಶೆಟ್ಟಿ, ಪ್ರತಿಕಾ ತಳವಾರ, ವಿದ್ಯಾರ್ಥಿ ಪ್ರತಿನಿಧಿ ಬೀರಲಿಂಗ ಗುಂಡಮನಿ ವೇದಿಕೆ ಮೇಲಿದ್ದರು. ಸಂಸ್ಥೆಯ ಸಹ-ಕಾರ್ಯದರ್ಶಿ ಅಶೋಕ ವಾರದ, ಪ್ರಾಧ್ಯಾಪಕರಾದ ಮಹಾದೇವ ಸಂಕಪಾಲ, ಡಾ.ರವಿ ಲಮಾಣಿ, ಡಾ.ಪ್ರಕಾಶ ರಾಠೋಡ, ಎಂ.ಐ.ಮಿಂಚ, ಪಿ.ಆರ್.ಪಾಟೀಲ, ಪಿ.ಎ.ಪಾಂಡೆ, ಭೀಮಾಶಂಕರ ಅರಳಗುಂಡಗಿ, ಡಾ.ಎಸ್.ಐ.ಭಂಡಾರಿ, ಡಾ.ಸುಮಾ ನಿರ್ಣಿ, ಎಸ್.ಎಸ್.ಮಂಗಳೂರ ಇದ್ದರು. ಡಾ.ರವಿ ಗೋಲಾ ನಿರೂಪಿಸಿದರು, ಡಾ.ನಾಗರಾಜ ಮುರಗೋಡ ಸ್ವಾಗತಿಸಿದರು, ಮಹೇಶ ರೂಡಗಿ ವಂದಿಸಿದರು.

ಸಿಎಂ ಬದಲಾವಣೆ ಹೈಕಮಾಂಡ್‌ಗೆ ಬಿಟ್ಟಿದ್ದು

• **ಕನ್ನಡಪ್ರಭ ವಾರ್ತೆ** ವಿಜಯಪುರ

ಕಳೆದ ಮೂರು ವರ್ಷಗಳಿಂದ ಸಿಎಂ ಬದಲಾವಣೆ ವಿಚಾರವಾಗಿ ಪ್ರಚಾರ ಮಾಡುತ್ತಲೇ ಬರುತ್ತಿದ್ದೀರಾ. ಆದರೆ, ಕೊನೆಗೆ ಪಕ್ಷ ಏನು ಹೇಳುತ್ತದೆ ಅದೇ ಆಗುತ್ತದೆ. ರಾಜ್ಯದಲ್ಲಿ ಅಭಿವೃದ್ಧಿ ವಿಚಾರದಲ್ಲಿ ಯಾವುದೇ ತೊಂದರೆ ಇಲ್ಲ. ಸಿಎಂ, ಡಿಸಿಎಂ, ಮಂತ್ರಿಗಳು, ಶಾಸಕರು ಎಲ್ಲರೂ ಕೆಲಸ ಮಾಡುತ್ತಿದ್ದಾರೆ ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿದರು.



ರಾಜ್ಯದಲ್ಲಿ ಸಿಎಂ ಬದಲಾ ವಣೆ ವಿಚಾರದ ಕುರಿತು ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲವನ್ನೂ ಹೈಕಮಾಂಡ್ ತೀರ್ಮಾನಿಸುತ್ತದೆ. ಕೆಲ ಶಾಸಕರು ಹಾಗೂ ಸಚಿವರು ಡೆಲ್ಲಿಗೆ ಹೋಗುತ್ತಿರುವ ವಿಚಾರದ ಕುರಿತು ಮಾತನಾಡಿ, ಹೋಗುವುದರಲ್ಲಿ ತಪ್ಪೇನಿದೆ?. ಹಿಂದೆ ಬಿಜೆಪಿಯ ಕೇಂದ್ರ ಸರ್ಕಾರ ಐದು ವರ್ಷದಲ್ಲಿ ಮೂರು ಮೂ ರು ಬಾರಿ ಬದಲಾವಣೆ ಮಾಡುತ್ತಾರಲ್ಲ, ಕಾಂಗ್ರೆಸ್ ಸರ್ಕಾರ ಹೈ ಕಮಾಂಡ್ ಏನೇ ನಿರ್ಣಯ ತಗೊಂಡರು ಒಪ್ಪಿಕೊಳ್ಳುತ್ತೇವೆ. ಹಿಂದೆ ಕೆಲ ಮಂತ್ರಿಗಳು ಖಾತೆನೇ ನಿರ್ವಹಿಸಿಲ್ಲ. ಹಾಗಾಗಿ ಹೋಗಿದ್ದಾರೆ ಎಂದರು.

ಬಾಗಲಕೋಟೆ ದಾವಣಗೆರೆ ಎರಡು ಮತಕ್ಷೇತ್ರದಲ್ಲಿ ಸರಳವಾಗಿ ಗೆದ್ದಿದ್ದೇವೆ. ಆದರೆ, ದಾವಣಗೆರೆಯಲ್ಲಿ ಒಳಗಿಂದ ಒಳಗ ಸ್ವಲ್ಪ ಮನಸ್ತಾಪ ಆಗಿದೆ. ದಾವಣಗೆರೆಯಲ್ಲಿ ಜನರ ಮತ ಓವರ್ ಆಲ್ ಕಾಂಗ್ರೆಸ್ ಪರವಾಗಿಯೇ ಇತ್ತು. ಮುಸ್ಲಿಂ ಸಮಾಜದವರನ್ನು ಕಾನ್ಫಿಡೆನ್ಸ್ ತಗೆದುಕೊಳ್ಳಲು ನಮ್ಮಲ್ಲಿ ಸ್ವಲ್ಪ ವ್ಯತ್ಯಾಸ ಆಗಿದೆ. ಅದಕ್ಕಾಗಿ ದಾವಣಗೆರೆ ಎಸ್‌ಡಿಪಿಐ ಅಭ್ಯರ್ಥಿ ಹೆಚ್ಚು ಮತಗಳನ್ನ ಪಡೆದಿದ್ದಾರೆ. ಮುಸ್ಲಿಂ ಸಮಾಜದ ವ್ಯಕ್ತಿಯನ್ನು ಹಿಂದೆ ಶಿಗ್ಗಾಂವನಲ್ಲಿ ಕಣಕ್ಕಿಳಿಸಿ ಆರಿಸಿ ತಂದಿದ್ದೇವೆ. ಮುಸ್ಲಿಂ ಸಮಾಜದವರು ಟಿಕೆಟ್ ಕೇಳೋದು ತಪ್ಪಲ್ಲ, ಆದ್ರೆ ಟಿಕೆಟ್ ಅನ್ನು ಪಕ್ಷ ಯಾರಿಗಾದ್ರೂ ನೀಡಿದರೆ ಅವರ ಪರವಾಗಿ ಕೆಲಸ ಮಾಡಬೇಕು. ಸದ್ಯ ದಾವಣಗೆರೆ ಬಗ್ಗೆ ಪಕ್ಷದ ಹಿರಿಯರು ಚರ್ಚಿಸಿ ತೀರ್ಮಾನ ತೆಗೆದುಕೊಳ್ತಾರೆ. ಈ ಚುನಾವಣೆಯಲ್ಲಿ ಈಗಾಗಲೇ ಗೆದ್ದಾಗಿದೆ. ಹಿಂದೆ ಏನೇ ತಪ್ಪಾಗಿದ್ದರೂ ಪಕ್ಷ ಅದನ್ನು ತಿದ್ದಿಕೊಂಡು ಹೋಗುವ ಪ್ರಯತ್ನ ಮಾಡುತ್ತದೆ ಎಂದು ಹೇಳಿದರು.

ಪ್ರಜಾಪ್ರಭುತ್ವ ಉಳಿಯಲು, ಜಾತ್ಯಾತಿತವಾಗಿ ದೇಶ ನಡೆಯಬೇಕು. ಚುನಾವಣೆ ಹಿನ್ನೆಲೆ ನಾನು ಮೊದಲ ಬಾರಿಗೆ ನೋಡಿರುವೆ ಪ.ಬಂಗಾಳದಲ್ಲಿ ಇಷ್ಟೊಂದು ಸಿಆರ್‌ಪಿಎಫ್, ಸೆಂಟ್ರಲ್ ಫೋರ್ಸ್ ಕೆಲಸ ಮಾಡಿದರೆ ಪ್ರಜಾಪ್ರಭುತ್ವ ವ್ಯವಸ್ಥೆ ಹೇಗೆ ಉಳಿಯುತ್ತದೆ? ಇದಕ್ಕೆ ಸರಿಯಾದ ಉತ್ತರ ಅಲ್ಲಿನ ಜನ ಕೊಡುತ್ತಾರೆ. ಅಲ್ಲಿ ಕೊಟ್ಟ ಭದ್ರತೆ ಹಾಗೆಯೇ ಬೇರೆ ರಾಜ್ಯದಲ್ಲೂ ಇರಬೇಕಿತಲ್ಲ? ಅಲ್ಲಿ ಚುನಾವಣಾ ಆಯೋಗದ ಒಲವು ಬಿಜೆಪಿ ಪರ ಇತ್ತು ಎಂಬುದು ಮೇಲ್ನೋಟಕ್ಕೆ ಸಾಬೀತಾಗುತ್ತದೆ. ಹಿಂದೆ ಟಿ.ಎನ್.ಶೇಷನ್ ಅವರು ಇದ್ರು, ಅವರು ಏನು ಬಂಗಾಲ ಒಂದಕ್ಕೆ ಮಾಡಿದ್ರಾ?, ದೇಶದ ತುಂಬಾ ಮಾಡಿದ್ರಲ್ಲ. ಟಿಎಂಸಿಗೆ ಆದ ನೋವು ಅವರು ಬಹಿರಂಗ ಪಡಿಸುವುದು ಸೂಕ್ತ.
• **ಶಿವಾನಂದ ಪಾಟೀಲ** ಸಚಿವ

ಬಾಗಲಕೋಟೆ ಹಾಗೂ ದಾವಣಗೆರೆ ಮತದಾರರಿಗೆ ಕೃತಜ್ಞತೆ ಹೇಳುವೆ. ಒಟ್ಟಾರೆ ಈ ಚುನಾವಣೆ, ಬಾಗಲಕೋಟೆ ಜನ ಜಾತ್ಯಾತೀತವಾಗಿ ಪಕ್ಷಾತೀತವಾಗಿ ಮೇಟಿ ಅವರ ಅಭಿವೃದ್ಧಿ ಕಾರ್ಯಕ್ಕೆ ಆದ್ಯತೆಕೊಟ್ಟಿದ್ದಾರೆ. ದಾವಣಗೆರೆಯಲ್ಲಿ ಸಹಿತ ಶಾಮನೂರ ಅವರ ಕೆಲಸಕ್ಕೆ ಗೌರವ ಕೊಟ್ಟು ಅವರ ಕುಟುಂಬಕ್ಕೆ ಆದ್ಯತೆ ನೀಡಿದ್ದಾರೆ. ಹೀಗಾಗಿ ಎರಡು ಮತಕ್ಷೇತ್ರದ ಜನತೆಗೆ ಧನ್ಯವಾದ ತಿಳಿಸುವೆ ಎಂದರು.

ಕೆಲವರು ನನ್ನ ಹಾಗೂ ನನ್ನ ಕುಟುಂಬದ ಬಗ್ಗೆ ಮಾತನಾಡುವವರಿಗೆ ಕೋರ್ಟ್‌ನಲ್ಲಿ ಉತ್ತರ ಕೊಡುವೆ. ಮಾತನಾಡುವುದರಿಂದ ಮತ ಬರಲ್ಲ, ಕೇಕೆ ಬರಬಹುದು, ನಾಲ್ಕಾರು ಹುಡುಗರನ್ನು ಚೀರಾಡಿಸಬ ಹುದು. ಅದನ್ನು ನಾವು ಮಾಡಿಸಬಹುದು, ಯಾರಿಗೂ ಪ್ರೊವೋಕ್ ಮಾಡುವುದು ನನಗೂ ಅವರಿಗೂ ಸೂಕ್ತ ಅಲ್ಲ ಎಂದು ಮಾರ್ಮಿಕವಾಗಿ ನುಡಿದರು.

ತಲೆಸುತ್ತು ಬಂದು ಯೋಧ ಸಾವು

ವಿಜಯಪುರ: ಜಮೀನಿನಲ್ಲಿ ಕೆಲಸ ಮಾಡುವಾಗ ತಲೆಸುತ್ತು ಬಂದು ಬಿದ್ದು ಸಿ.ಆರ್.ಪಿ.ಎಫ್ ಯೋಧನೋರ್ವ ಸಾವನ್ನಪ್ಪಿರುವ ಘಟನೆ ಇಂಡಿ ತಾಲೂಕಿನ ಹೊರ್ತಿಯಲ್ಲಿ ಸೋಮವಾರ ರಾತ್ರಿ 9.45ಕ್ಕೆ ಜರುಗಿದೆ. ರಜೆಗಾಗಿ ಬಂದಿದ್ದ ಯೋಧ ರೇವಣಸಿದ್ಧ ಅಶೋಕ ಪುಜಾರಿ (30) ಜಮೀನಿನಲ್ಲಿ ಕೆಲಸ ಮಾಡುವಾಗ ಮೃತ ದುರ್ದೈವಿಯಾಗಿದ್ದಾನೆ. ಕಳೆದ 5 ವರ್ಷಗಳಿಂದ ಹೈದ್ರಾಬಾದ್ ಸಿ.ಆರ್.ಪಿ.ಎಫ್ ನಲ್ಲಿದ್ದ ರೇವಣಸಿದ್ಧ ಪೂಜಾರಿ ಮೃತಪಟ್ಟಿದ್ದಾನೆ. ಈ ಕುರಿತು ಹೊರ್ತಿ ಠಾಣೆಯಲ್ಲಿ ಮೃತ ಯೋಧನ ಪತ್ನಿ ದೂರು ದಾಖಲಿಸಿದ್ದಾರೆ.

ಅಕ್ಕಮಹಾದೇವಿ ಮಹಿಳಾ ವಿವಿ ಪ್ರಗತಿ ಪಥದತ್ತ

ಮಾಜಿ ಕುಲಪತಿ ಪ್ರೊ.ಮೀನಾ ಚಂದಾವರಕರ ಪ್ರಶಂಸೆ | ಎಎಎ ಕಮಿಟಿಯ ನಿರ್ಗಮನ ಸಭೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಕಳೆದ 10 ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಮಹತ್ತರ ಸಾಧನೆ ಮಾಡಿದ್ದು, ಪ್ರಗತಿ ಪಥದತ್ತ ಸಾಗುತ್ತಿದೆ ಎಂದು ಮಾಜಿ ಕುಲಪತಿ ಹಾಗೂ ಟ್ರಿಪಲ್ ಎ ಉನ್ನತ ಮಟ್ಟದ ತಜ್ಞರ ತಂಡದ ಮುಖ್ಯಸ್ಥೆ ಪ್ರೊ.ಮೀನಾ ಚಂದಾವರಕರ ಸಂತಸ ವ್ಯಕ್ತಪಡಿಸಿದರು.ನಗರದ ಮಹಿಳಾ ವಿಶ್ವವಿದ್ಯಾನಿಲಯದ ಮುಖ್ಯ ಅವರಣದಲ್ಲಿ ಕಳೆದ 2 ದಿನಗಳಿಂದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಪರಿಶೀಲನೆ ನಡೆಸಿದ ನಂತರ ಮಂಗಳವಾರ ಆಯೋಜಿಸಿದ್ದ ಎಎಎ ಕಮಿಟಿಯ ನಿರ್ಗಮನ ಸಭೆಯಲ್ಲಿ ಮಾತನಾಡಿದರು.

ಮಹಿಳಾ ವಿಶ್ವವಿದ್ಯಾನಿಲಯ ಪ್ರಗತಿ ಪಥದತ್ತ ಸಾಗುತ್ತಿದ್ದರೂ ಇನ್ನೂ ಹಲವು ಸಮಸ್ಯೆ ಮತ್ತು ಸವಾಲುಗಳಿವೆ. ಇವುಗಳಲ್ಲಿ ಮುಖ್ಯವಾಗಿ ಇತ್ತೀಚಿನ ವರ್ಷಗಳಲ್ಲಿ ಖಾಯಂ ಬೋಧಕರ ಹುದ್ದೆ ಬಹಷ್ಟು ಖಾಲಿ ಉಳಿದಿದ್ದು, ಈ ಕಾರ್ಯಭಾರವನ್ನು ಅತಿಥಿ ಉಪನ್ಯಾಸಕರು ನಿಭಾಯಿಸುತ್ತಿದ್ದಾರೆ. ಇದು ಶೈಕ್ಷಣಿಕ ಗುಣಮಟ್ಟದ ಮೇಲೆ ವ್ಯತಿರಿಕ್ತ ಪರಿಣಾಮಗಳನ್ನು ಬೀರುತ್ತಿದೆ. ಆದ್ದರಿಂದ ಆದಷ್ಟು ಬೇಗ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ವಿಶ್ವವಿದ್ಯಾನಿಲಯದ ಆಡಳಿತ ಮುಂದಾಗಬೇಕು ಎಂದು ಸಲಹೆ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ ಮಾತನಾಡಿ, ಕಳೆದ 2 ದಿನಗಳಲ್ಲಿ, ನಮ್ಮ ವಿವಿಯ ಆವರಣದಲ್ಲಿ ಟ್ರಿಪಲ್ ಎ ತಂಡದ ಭೇಟಿಯು ಪ್ರೋತ್ಸಾಹದಾಯಕ ಮತ್ತು ಸ್ಫೂರ್ತಿದಾಯಕವಾಗಿತ್ತು. ನಮ್ಮ ಅಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಆಡಳಿತ ತಂಡಗಳೊಂದಿಗಿನ ನಡೆಸಿದ ಸಂವಹನವು ನಮ್ಮ ಸಾಧನೆಗಳನ್ನು ಪ್ರಸ್ತುತಪಡಿಸಲು ನಮಗೆ ಅವಕಾಶವನ್ನು ಒದಗಿಸಿದೆ. ಜೊತೆಗೆ ನಮ್ಮ ಅತ್ಯುತ್ತಮ ಅಭ್ಯಾಸಗಳು, ಆಡಳಿತ, ವಿಸ್ತರಣಾ ಚಟುವಟಿಕೆಗಳು, ವ್ಯವಸ್ಥೆಗಳು ಮತ್ತು ಭವಿಷ್ಯದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸಲು ನಮಗೆ ಅವಕಾಶ ಮಾಡಿಕೊಟ್ಟಿದೆ. ಟ್ರಿಪಲ್ ಎ ತಂಡದ ಭೇಟಿಯ ಸಮಯದಲ್ಲಿ, ನಮ್ಮ ಶೈಕ್ಷಣಿಕ ಕಾರ್ಯಕ್ರಮಗಳು, ಸಂಶೋಧನಾ ಉಪಕ್ರಮಗಳು, ವಿಸ್ತರಣಾ ಚಟುವಟಿಕೆಗಳು ಮತ್ತು ವಿದ್ಯಾರ್ಥಿ ಬೆಂಬಲ ವ್ಯವಸ್ಥೆಗಳನ್ನು ಪ್ರದರ್ಶಿಸಲು ನಮಗೆ ಅವಕಾಶ ಸಿಕ್ಕಿತು. ನಾವೀನ್ಯತೆ, ವಿಮರ್ಶಾತ್ಮಕ ಚಿಂತನೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಪೋಷಿಸುವ ರೋಮಾಂಚಕ ಶೈಕ್ಷಣಿಕ ವಾತಾವರಣವನ್ನು ನಿರ್ಮಿಸುವಲ್ಲಿ ನಾವು ಇತ್ತೀಚಿನ ವರ್ಷಗಳಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಕುಲಪತಿ ಪ್ರೊ.ವಿಜಯಾ ತಿಳಿಸಿದರು.



ಮಹಿಳಾ ವಿಶ್ವವಿದ್ಯಾಲಯ ಭೌತಿಕವಾಗಿ, ಶೈಕ್ಷಣಿಕವಾಗಿ ಮತ್ತು ಮೂಲಸೌಕರ್ಯಗಳ ದೃಷ್ಟಿಯಿಂದ ಸಾಕಷ್ಟು ಪ್ರಗತಿ ಸಾಧಿಸಿದೆ. ಹಲವು ಸಮಸ್ಯೆಗಳು ಮತ್ತು ಸವಾಲುಗಳ ಮಧ್ಯೆಯೂ ಈ ಸಾಧನೆ ಮಾಡಿರುವುದು ಅತ್ಯಂತ ಪ್ರಶಂಸನೀಯ.
• **ಪ್ರೊ.ಮೀನಾ ಚಂದಾವರಕರ,** ಮುಖ್ಯಸ್ಥೆ ಟ್ರಿಪಲ್ ಎ ಉನ್ನತ ಮಟ್ಟದ ತಜ್ಞರ ತಂಡ

ನಿರ್ಗಮನ ಸಭೆಯಲ್ಲಿ ಎಎಎ ಕಮಿಟಿಯ ಸದಸ್ಯರಾದ ಕಲಬುರಗಿ ವಿವಿಯ ಗಣಿತ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಎನ್.ಬಿ.ನಡವಿನಮನಿ, ಧಾರವಾಡದ ಕವಿವಿ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ.ಬಿ.ಎಚ್.ನಾಗೂರ, ಕಲಬುರಗಿಯ ಕೇಂದ್ರೀಯ ವಿವಿಯ ಇಂಗ್ಲಿಷ್ ವಿಭಾಗದ ಪ್ರಾಧ್ಯಾಪಕ ಪ್ರೊ.ಬಸವರಾಜ ಡೋಣೂರ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ.ಬಿ.ಎಲ್.ಲಕ್ಕಣ್ಣವರ, ಆರ್ಥಿಕ ಅಧಿಕಾರಿ ರಾಮಣ್ಣ ಅಥಣಿ, ಐಕ್ಯುಎಸಿ ನಿರ್ದೇಶಕಿ ಪ್ರೊ.ಶಾಂತಾದೇವಿ, ಡೀನರುಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕ ಸಿಬ್ಬಂದಿ ಉಪಸ್ಥಿತರಿದ್ದರು.

ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿನಲ್ಲಿ 8ಕ್ಕೆ ರಾಷ್ಟ್ರೀಯ ಮಟ್ಟದ ತಾಂತ್ರಿಕ ಉತ್ಸವ

ವಿಜಯಪುರ: ನಗರದ ಬಿಎಲ್‌ಡಿಇ ಸಂಸ್ಥೆಯ ವಚನ ಪಿತಾಮಹ ಡಾ.ಪಿ.ಜಿ.ಹಳಕಟ್ಟಿ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕಾಲೇಜು INVICTUS-2026 ಎಂಬ ರಾಷ್ಟ್ರೀಯ ಮಟ್ಟದ ತಾಂತ್ರಿಕ ಉತ್ಸವವನ್ನು ಮೇ 8 ರಂದು ಆಚರಿಸುತ್ತಿದೆ. ಭಾರತೀಯ ತಾಂತ್ರಿಕ ಶಿಕ್ಷಣ ಸಂಘದ ಸಹಯೋಗದೊಂದಿಗೆ ಸಿವಿಲ್ ಮತ್ತು ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದಿಂದ ಸಂಘಟಿಸಲಾಗಿದೆ. ಒಟ್ಟು 11 ಎಂಜಿನಿಯರಿಂಗ್ ವಿಭಾಗಗಳು ಭಾಗಿಯಾಗಲಿದ್ದು, 28 ವಿಭಿನ್ನ ತಾಂತ್ರಿಕ ಕಾರ್ಯಕ್ರಮಗಳು ನಡೆಯುತ್ತಿವೆ. ಈ ಉತ್ಸವವು 1 ಲಕ್ಷ ನಗದು ಬಹುಮಾನ ಹೊಂದಿದ್ದು, ಕರ್ನಾಟಕ ಮಾತ್ರವಲ್ಲದೆ ಆಂಧ್ರಪ್ರದೇಶ, ತೆಲಂಗಾಣ ಮತ್ತು ಮಹಾರಾಷ್ಟ್ರದ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಬಾರ್‌ಕೋಡ್ ನೆಟ್‌ವರ್ಕ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಉಪಾಧ್ಯಕ್ಷರಾದ ರೋಹಿತ ಆರಾಧ್ಯ, ಕರ್ನಾಟಕ ಸರ್ಕಾರದ ಎಡಿಎಲ್‌ಆರ್‌ನ ಪುನೀತ ಪಸೋಡೆ, ಟಿಸಿಎಸ್‌ನ ತಂಡದ ಮುಖ್ಯ ಇಂಜಿನಿಯರ್ ವಸುಂಧರಾ ಉಪಾಧ್ಯೆ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ. ಬಿಎಲ್‌ಡಿಇ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಸುನಿಲಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಾಂಶುಪಾಲ ಡಾ.ಮಂಜುನಾಥ.ಪಿ, ಡಾ.ಲೀನಾ ರಾಫ ಮತ್ತು ಡಾ.ಪಿ.ವಿ.ಮಾಳಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಕನಾಳ ರೈತರಿಂದ ಎಸ್‌ಎಲ್‌ಒ ಕಚೇರಿಗೆ ಮುತ್ತಿಗೆ

ನೋಟಿಸ್ ನೀಡದೆ ಕಾಲುವೆ ಕಾಮಗಾರಿಗೆ ವಿರೋಧ | ಆಲಮಟ್ಟಿಯಲ್ಲಿ ರೈತರ ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ಆಲಮಟ್ಟಿ

ಸಂಕನಾಳ ಶಾಖಾ ಕಾಲುವೆ ನಿರ್ಮಾಣಕ್ಕೆ ಸ್ವಾಧೀನಪಡಿಸಿಕೊಂಡ ಜಮೀನಿನ ರೈತರಿಗೆ 11(1) ನೋಟಿಸ್ ನೀಡಿ ಕಾಮಗಾರಿ ಆರಂಭಿಸಬೇಕು ಎಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಸಂಕನಾಳ ಭಾಗದ ರೈತರು ಸೋಮವಾರ ಆಲಮಟ್ಟಿಯಲ್ಲಿ ಪ್ರತಿಭಟನೆ ನಡೆಸಿದರು.

ರಾಮಲಿಂಗೇಶ್ವರ ದೇವಸ್ಥಾನದಿಂದ ಪ್ರತಿಭಟನಾ ಮೆರವಣಿಗೆ ಹೊರಟ ರೈತರು ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿಗೆ ತೆರಳಿ ಎಸ್‌ಎಲ್‌ಒ ಎಂ.ಬಿ.ನಾಗಠಾಣ ಅವರಿಗೆ ಮನವಿ ಸಲ್ಲಿಸಿದರು.


ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಉಮೇಶ ವಾಲೀಕಾರ, ಮುಳವಾಡ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಸಂಕನಾಳ ಶಾಖಾ ಕಾಲುವೆ ನರಸಲಗಿ, ಅಗಸಬಾಳ, ಸಂಕನಾಳ, ಕಣಕಾಲ, ಸೋಲವಾಡಗಿ, ಕನ್ನಾಳ, ವಡವಡ, ಗಿಜಾಯವಾಡಗಿ ಗ್ರಾಮಗಳ ವ್ಯಾಪ್ತಿಯಲ್ಲಿ ಹಾದು ಹೋಗಿದೆ. ಈ ಮೊದಲು ಸಂಕನಾಳದವರೆಗೆ ಕಾಲುವೆ ಕಾಮಗಾರಿ ಮುಗಿದಿದೆ. ಆದರೆ, ಕನ್ನಾಳ ಗ್ರಾಮದವರೆಗೆ ಇನ್ನೂ ವಿತರಣಾ ಕಾಲುವೆ ಕಾಮಗಾರಿ ಬಾಕಿ ಉಳಿದಿದೆ ಎಂದರು.

ಈ ಹಿಂದೆ ಬಾಕಿ ಉಳಿದ ಕಾಮಗಾರಿ ಪೂರ್ಣಗೊಳಿಸಲು ಹೋರಾಟ ನಡೆಸಿದ್ದೆವು. ಹೋರಾಟದ ಫಲವಾಗಿ ಇಲಾಖೆ ಎಚ್ಚೆತ್ತುಕೊಂಡು ಉಳಿದ ಕಾಮಗಾರಿಗೆ ಚಾಲನೆ ನೀಡಿತ್ತು. ಆದರೆ, ಭೂಮಿ ಕಳೆದುಕೊಳ್ಳುವ ರೈತರಿಗೆ ನೋಟಿಸ್ ನೀಡದೆ ಕಾಮಗಾರಿ ಆರಂಭಿಸಿದ್ದರಿಂದ ರೈತರು ತಡೆ ಒಡ್ಡಿದ್ದಾರೆ. ಇದರಿಂದ ಕಾಮಗಾರಿ ಸ್ಥಗಿತಗೊಂಡಿದೆ ಎಂದು ತಿಳಿಸಿದರು.

ಬೇಸಿಗೆಯ ತಾಪ ಹೆಚ್ಚಿರುವುದರಿಂದ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. 4-5 ಕಿ.ಮೀ ದೂರ ಹೋಗಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ರೈತರಿಗೆ ಕೂಡಲೇ ನೋಟಿಸ್ ನೀಡಿ ಬಾಕಿ ಉಳಿದ ಕಾಮಗಾರಿಯನ್ನು ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು.

ಶೀಘ್ರದಲ್ಲಿ ನೋಟಿಸ್ ನೀಡಿ ಕಾಮಗಾರಿಗೆ ಚಾಲನೆ ನೀಡದಿದ್ದರೆ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಪ್ರಾರಂಭಿಸಲಾಗುವುದು ಎಂದು ಉಮೇಶ ವಾಲೀಕಾರ ಎಚ್ಚರಿಕೆ ನೀಡಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ, ಪ್ರಲ್ಹಾದ ನಾಗರಾಳ, ಸಾಯಬಣ್ಣ ಅಂಗಡಿ, ಇಬ್ರಾಹಿಂ ವಾಲೀಕಾರ, ಮಲ್ಲಪ್ಪ ಹಳೆನಿಡಗುಂದಿ, ಬಸಪ್ಪ ತೋಳಮಟ್ಟಿ, ಶ್ರೀಶೈಲ ಕಲಾದಗಿ, ಗುರಪ್ಪ ಪೂಜಾರಿ, ಸಂದೀಪ ನಾಗರಡ್ಡಿ, ಸೋಮೇಶ ನಾಗರಡ್ಡಿ, ಮುದಕಪ್ಪ ಮೇಟಿ, ಮಂಜು ಬಿರಾದಾರ, ಅಶೋಕ ಹಡಪದ, ಎಮನೂರಪ್ಪ ಸರೂರ, ಸಂಗು ಮೇಟಿ, ಹಣಮಂತ ವಾಲೀಕಾರ, ಪರಶೂರಾಮ ಮುತ್ತಗಿ, ಪ್ರಕಾಶ ವಾಲೀಕಾರ, ಶಿವಪ್ಪ ಚಲುವಾದಿ, ಸಂಗಪ್ಪ ಹುನಗುಂದ ಸೇರಿ ನೂರಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



■ ಮುಳವಾಡ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಸಂಕನಾಳ ಶಾಖಾ ಕಾಲುವೆ ನರಸಲಗಿ, ಆಗಸಬಾಳ, ಸಂಕನಾಳ, ಕಣಕಾಲ, ಸೋಲವಾಡಗಿ, ಕನ್ನಾಳ, ವಡವಡ, ಗಿಜಾಯವಾಡಗಿ ಗ್ರಾಮಗಳ ವ್ಯಾಪ್ತಿಯಲ್ಲಿ ಹಾದು ಹೋಗಿದೆ. ಈ ಮೊದಲು ಸಂಕನಾಳದವರೆಗೆ ಕಾಲುವೆ ಕಾಮಗಾರಿ ಮುಗಿದಿದೆ. ಆದರೆ, ಕನ್ನಾಳ ಗ್ರಾಮದವರೆಗೆ ಇನ್ನೂ ವಿತರಣಾ ಕಾಲುವೆ ಕಾಮಗಾರಿ ಬಾಕಿ ಉಳಿದಿದೆ ಎಂದ ರೈತರು

ಪಾರದರ್ಶಕವೇ ಈ ಕಾಯ್ದೆಯ ಮೂಲ ಮಂತ್ರ. ಈ ಕಾಯ್ದೆ ಜಾರಿಗೆ ಮುನ್ನವೇ ಕೆಲ ವರಿಗಷ್ಟೇ ಮಾಹಿತಿ ಗೊತ್ತಾಗುತ್ತಿತ್ತು. ಸಾರ್ವಜನಿಕರು ಕೇಳುವ ಮಾಹಿತಿ ನೀಡಿ, 41 ಎಬಿ ಮಾಡಿದರೆ, ನಿಮ ಗೆ ಕೆಲಸ ಹಗುರವಾಗುತ್ತದೆ. ಇದೊಂದು ಸರಳ ಕಾಯ್ದೆಯಾಗಿದ್ದು, ಆದರೆ, ಶಕ್ತಿಶಾಲಿ ಕಾಯ್ದೆಯಾಗಿದೆ.

• **ರಾಜಶೇಖರ.ಎಸ್** ಆಯುಕ್ತರು,

ಮಾಹಿತಿ ಹಕ್ಕು ಕಾಯ್ದೆಯಡಿ ಸುಗಮ ಆಡಳಿತ ನೀಡಿ

ಅಧಿಕಾರಿಗಳಿಗೆ ಆಯುಕ್ತ ರುದ್ರಣ್ಣ ಹರ್ತಿಕೋಟೆ ಸೂಚನೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಮಾಹಿತಿ ಹಕ್ಕು ಕಾಯ್ದೆ ಸರ್ಕಾರದ ಆಡಳಿತ ವ್ಯವಸ್ಥೆಯಲ್ಲಿ ಜನಪರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಗೆ ಭದ್ರ ಬುನಾದಿಯಾಗಿದ್ದು, ಇಂತಹ ಜನಪರ ಈ ಕಾಯ್ದೆಯನ್ನು ಅಧಿಕಾರಿಗಳು ಅಧ್ಯಯನ ಮಾಡಿ ಸುಗಮ ಆಡಳಿತಕ್ಕೆ ಕೈಜೋಡಿಸಬೇಕು ಎಂದು ಕರ್ನಾಟಕ ಮಾಹಿತಿ ಹಕ್ಕು ಆಯೋಗದ ಆಯುಕ್ತ ರುದ್ರಣ್ಣ ಹರ್ತಿಕೋಟೆ ಹೇಳಿದರು.

ನಗರದ ಜಿಪಂ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಅರಿವು ಮೂಡಿಸುವ ವಿಶೇಷ ತರಬೇತಿ ಕಾರ್ಯಾಗಾರ ಮತ್ತು ಪ್ರಗತಿ ಪರಿಶೀಲನಾ ಸಭೆಯಲ್ಲಿಮಾತನಾಡಿದರು.ಆಯುಕ್ತರಾಜಶೇಖರ. ಎಸ್ ಮಾತನಾಡಿ, ಪಾರದರ್ಶಕವೇ ಈ ಕಾಯ್ದೆಯ ಮೂಲ ಮಂತ್ರ. ಈ ಕಾಯ್ದೆ ಜಾರಿಗೆ ಮುನ್ನವೇ ಕೆಲ ವರಿಗಷ್ಟೇ ಮಾಹಿತಿ ಗೊತ್ತಾಗುತ್ತಿತ್ತು. ಸಾರ್ವಜನಿಕರು ಕೇಳುವ ಮಾಹಿತಿ ನೀಡಿ, 41 ಎಬಿ ಮಾಡಿದರೆ, ನಿಮಗೆ ಕೆಲಸ ಹಗುರವಾಗುತ್ತದೆ. ಇದೊಂದು ಸರಳ ಕಾಯ್ದೆಯಾಗಿದ್ದು, ಆದರೆ, ಶಕ್ತಿಶಾಲಿ ಕಾಯ್ದೆಯಾಗಿ



ದೆ. ಹಾಗಾಗಿ 30 ಪುಟಗಳ ಈ ಕಾಯ್ದೆಯನ್ನು ಸಂಪೂರ್ಣವಾಗಿ ತಿಳಿದುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಒಬ್ಬ ವ್ಯಕ್ತಿ 50 ಅರ್ಜಿ ಹಾಕಿದರೂ, ನೀವು ಸಂಪೂರ್ಣ ಕಾಯ್ದೆಯನ್ನು ಅಧ್ಯಯನ ಮಾಡಿದ್ದರೆ, ಸುಲಭವಾಗಿ ಮಾಹಿತಿ ನೀಡಬಹುದಾಗಿದೆ. ಈ ವಿಷಯದಲ್ಲಿ ಆದಿತ್ಯ ಬಂಡೋಪಾಧ್ಯಾಯ ಕೇಸ್ ಓದಿದರೆ, ನಿಮಗೆ ಸುಲಭವಾಗುತ್ತದೆ ಎಂದರು. ನೀವು ಸಕಾಲಕ್ಕೆ ಉತ್ತರ ಕೊಡಲೇಬೇಕು. ಕೇಳಿದ ಮಾಹಿತಿ ತಕ್ಷಣ ನೀಡಬೇಕು ಎಂದರು.

ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆಸಂವಾದ ನಡೆಸಿದರು. ಅಧಿಕಾರಿಗಳಿಂದ ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದರು. ಜಿಲ್ಲಾಧಿಕಾರಿ ಡಾ.ಆನಂದ.ಕೆ ಮಾತನಾಡಿದರು.

ಮಾಹಿತಿ ಹಕ್ಕಿನಡಿ ಅರ್ಜಿದಾರ ಮಾಹಿತಿ ಕೋರಿ ಅರ್ಜಿ ಸಲ್ಲಿಸಿದರೆ, 30 ದಿನಗಳೊಗಾಗಿ ಉತ್ತರ ಕೊಡಬೇಕು. ಅರ್ಜಿದಾರ ಕೋರಿದ ಮಾಹಿತಿ ನೀಡಲು ಯಾವುದೇ ಕಾರಣಕ್ಕೂ ಹಿಂಜರಿಯಬೇಡಿ. ಒಂದು ವೇಳೆ ನೀವು ಮಾಹಿತಿ ನೀಡಲು ಹಿಂಜರಿದರೆ ಅದು ಅಪಾರ್ಥಕ್ಕೆ ಕಾರಣವಾಗಲಿದೆ. ಹಾಗಾಗಿ ಪ್ರಥಮ ಮೇಲ್ಮನವಿಗೆ ಹೋಗುವ ಮುನ್ನವೇ ಪ್ರತಿಯೊಬ್ಬ ಅಧಿಕಾರಿಯೂ ಉತ್ತರ ನೀಡಬೇಕು. ದ್ವಿತೀಯ ಮೇಲ್ಮನವಿಗೆ ಬಂದಾಗ ಅದನ್ನು ನಾವು ನೋಡಿಕೊಳ್ಳುತ್ತೇವೆ.

• **ರುದ್ರಣ್ಣ ಹರ್ತಿಕೋಟೆ,** ಆಯುಕ್ತರು, ಕರ್ನಾಟಕ ಮಾಹಿತಿ ಹಕ್ಕು ಆಯೋಗ

ಜಿಪಂ ಸಿಇಒ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಕೆರೆ ಭರ್ತಿ, ಕಾಲುವೆಗೆ ನೀರು ಹರಿಸಲು ಆಗ್ರಹ

ಸಿಇ ಕಚೇರಿಗೆ ಮುತ್ತಿಗೆ | ಕ್ಲೋಸರ್‌ಕಾಮಗಾರಿ ವಿಳಂಬಕ್ಕೆ ಆಕ್ರೋಶ



• **ಕನ್ನಡಪ್ರಭ ವಾರ್ತೆ** ಆಲಮಟ್ಟಿ

ಜನ-ಜಾನುವಾರುಗಳಿಗೆ ಕುಡಿಯಲು ನೀರಿಲ್ಲದೆ ಪರದಾಡುವ ಸ್ಥಿತಿಯಲ್ಲಿವೆ. ಜಿಲ್ಲೆಯ ಎಲ್ಲ ಕೆರೆಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲು ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ರೈತ ಸಂಘ ಹಾಗೂ ಹಸಿರು ಸೇನೆ ಜಂಟಿಯಾಗಿ ಬೃಹತ್ ಪ್ರತಿಭಟನೆ ನಡೆಸಿದವು.

ಆಲಮಟ್ಟಿಯ ರಾಮಲಿಂಗೇಶ್ವರ ದೇವಸ್ಥಾನದಿಂದ ನೂರಾರು ರೈತರು ಪ್ರತಿಭಟನಾ ಮೆರವಣಿಗೆ ನಡೆಸಿ ಸಿಇ ಕಚೇರಿಗೆ ತೆರಳಿ ಮುಖ್ಯ ಅಭಿಯಂತರ ಡಿ.ಬಸವರಾಜ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ, ತಾಲ್ಲೂಕಾಧ್ಯಕ್ಷ ಸೀತಪ್ಪ ಗಣಿ ಮಾತನಾಡಿ, ಲಾಲ್ ಬಹದ್ದೂರ್‌ಶಾಸ್ತ್ರಿ ಜಲಾಶಯದ ವ್ಯಾಪ್ತಿಗೆ ಬರುವ ಮುಳವಾಡ ಮತ್ತು ಚಿಮ್ಮಲಗಿ ಏತನೀರಾವರಿ ಯೋಜನೆ ವ್ಯಾಪ್ತಿಯ ಕಾಲುವೆಗಳಿಗೆ ಹಿಂಗಾರು ಬೆಳೆಗಳಿಗೆ ನೀರು ಹರಿಸಿ ನಂತರ ನೀರು ಪೂರೈಕೆ ಸ್ಥಗಿತಗೊಳಿಸಲಾಗಿದೆ. ಬೇಸಿಗೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲಕ್ಕಾಗಿ ಪ್ರಾದೇಶಿಕ ಆಯುಕ್ತರ ಅನುಮತಿಯಂತೆ ಏಪ್ರಿಲ್ 30ರವರೆಗೆ ಕೆರೆಗಳಿಗೆ ನೀರು ಹರಿಸಿ ಸದ್ಯ ಸ್ಥಗಿತಗೊಳಿಸಲಾಗಿದೆ ಎಂದರು. ಆದರೆ ಇಲ್ಲಿಯವರೆಗೂ ಕೇವಲ ಶೇ.30ರಿಂದ 35ರಷ್ಟು ಮಾತ್ರ ಕೆರೆಗಳು ಭರ್ತಿಯಾಗಿವೆ. ಈ ಬಾರಿ ಬೇಸಿಗೆಯ ತಾಪ ಹೆಚ್ಚಿರುವುದರಿಂದ ಅಲ್ಪ ಪ್ರಮಾಣದಲ್ಲಿ ಹರಿಸಿದ ನೀರು ಬೇಗನೆ ಆವಿಯಾಗಿ ಖಾಲಿಯಾಗುತ್ತಿದೆ. ಇನ್ನೂ ಒಂದು ತಿಂಗಳು ಬೇಸಿಗೆ ಇರುವುದರಿಂದ ಕೆರೆಗಳಲ್ಲಿನ ನೀರು ಬೇಗನೆ ಬರಿದಾಗಲಿದೆ. ಮುಂದೆ ಜಾನುವಾರುಗಳಿಗೆ ಕುಡಿಯಲು ನೀರು ಸಿಗುವುದಿಲ್ಲ. ಆದ್ದರಿಂದ ತುರ್ತಾಗಿ ಕಾಲುವೆಗಳಿಗೆ ನೀರು ಹರಿಸಿ ಜಿಲ್ಲೆಯ ಎಲ್ಲ ಕೆರೆಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.

ಕಾಲುವೆಗೆ ನೀರು ಹರಿಸುವುದನ್ನು ಸ್ಥಗಿತಗೊಳಿಸಿದ ಕೂಡಲೇ ಕ್ಲೋಸರ್‌ಕಾಮಗಾರಿ ಪ್ರಾರಂಭಿಸಬೇಕು. ಪ್ರತಿ ವರ್ಷ ಕ್ಲೋಸರ್‌ಕಾಮಗಾರಿ ಕುಂಠಿತಗೊಳ್ಳುತ್ತಿದೆ. ಸರಿಯಾಗಿ ಕಾಮಗಾರಿ ಮಾಡದ ಕಾರಣ ನೀರು ಬಿಟ್ಟಾಗ ಕಾಲುವೆಯಿಂದ ಸರಾಗವಾಗಿ ಹರಿಯುವುದಿಲ್ಲ. ಇದರಿಂದ ಕಾಲುವೆಯ ಕೊನೆಯ ಭಾಗದವರೆಗೂ ನೀರು ತಲುಪದೆ ರೈತರು ವಂಚಿತರಾಗುತ್ತಿದ್ದಾರೆ ಎಂದು ದೂರಿದರು.

ಪ್ರತಿವರ್ಷ ಕಾಲುವೆ ಸ್ವಚ್ಛಗೊಳಿಸಲು ಕ್ಲೋಸರ್ ಕಾಮಗಾರಿ ಮತ್ತು ವಾರ್ಷಿಕ ನಿರ್ವಹಣಾ ವೆಚ್ಚ (ಎಒಎಂ) ಎಂದುಎರಡುರೀತಿಯಯೋಜನೆಹಮ್ಮಿಕೊಳ್ಳಲಾಗುತ್ತದೆ. ಈ ಎರಡೂ ಯೋಜನೆಗಳಡಿ ಪ್ರತಿವರ್ಷ ಕೋಟ್ಯಂತರ ರೂ. ವ್ಯಯವಾಗುತ್ತಿದೆ. ಎರಡೂ ಯೋಜನೆಗಳ ಉದ್ದೇಶ ಒಂದೇ - ಕಾಲುವೆಯ ಹೂಳು, ಗಿಡಗಂಟಿಗಳನ್ನು ತೆರವುಗೊಳಿಸುವುದು. ಹೀಗಿದ್ದರೂ ಅನಾವಶ್ಯಕವಾಗಿ ಎರಡು ಯೋಜನೆಗಳ ನೆಪದಲ್ಲಿ ಸಾರ್ವಜನಿಕರ ಹಣ ದುರುಪಯೋಗ ಆಗುತ್ತಿದೆ ಎಂಬ ಅನುಮಾನವಿದೆ ಎಂದು ಆರೋಪಿಸಿದರು.

ಹೆಸರಿಗೆ ಮಾತ್ರ ಕ್ಲೋಸರ್‌ಕಾಮಗಾರಿ ಮತ್ತು ಎಒಎಂ ಇದೆ. ಆದರೆ, ವಾಸ್ತವಿಕವಾಗಿ ಕಾಲುವೆ ಸ್ವಚ್ಛಗೊಳಿಸುವ ಕಾರ್ಯ ನಡೆಯುವುದಿಲ್ಲ. ಇದರಿಂದ ಯೋಜನೆಯ ಉದ್ದೇಶವೇ ಹಳ್ಳ ಹಿಡಿದಂತಾಗಿದೆ. ಆದ್ದರಿಂದ ಕ್ಲೋಸರ್ ಕಾಮಗಾರಿಯನ್ನು ಪ್ರಾಮಾಣಿಕವಾಗಿ ಕೈಗೊಳ್ಳಬೇಕು ಎಂದು ಅರವಿಂದ ಕುಲಕರ್ಣಿ ಹಾಗೂ ಜಿಲ್ಲಾಧ್ಯಕ್ಷ ಉಮೇಶ ವಾಲೀಕಾರ ಒತ್ತಾಯಿಸಿದರು.

ಪ್ರಲ್ಹಾದ ನಾಗರಾಳ, ಸಾಯಬಣ್ಣ ಅಂಗಡಿ, ಇಬ್ರಾಹಿಂ ವಾಲೀಕಾರ, ಮಲ್ಲಪ್ಪ ಹಳೆನಿಡಗುಂದಿ, ಬಸಪ್ಪ ತೋಳಮಟ್ಟಿ, ಶ್ರೀಶೈಲ ಕಲಾದಗಿ, ಗುರಪ್ಪ ಪೂಜಾರಿ, ಸಂದೀಪ ನಾಗರಡ್ಡಿ, ಸೋಮೇಶ ನಾಗರಡ್ಡಿ, ಮುದಕಪ್ಪ ಮೇಟಿ, ಮಂಜು ಬಿರಾದಾರ, ಅಶೋಕ ಹಡಪದ, ಎಮನೂರಪ್ಪ ಸರೂರ, ಸಂಗು ಮೇಟಿ, ಹಣಮಂತ ವಾಲೀಕಾರ, ಪರಶೂರಾಮ ಮುತ್ತಗಿ, ಪ್ರಕಾಶ ವಾಲೀಕಾರ, ಶಿವಪ್ಪ ಚಲುವಾದಿ, ಸಂಗಪ್ಪ ಹುನಗುಂದ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಮಣ್ಣು, ನೀರು ವಿಶ್ಲೇಷಣೆ ಶಿಬಿರ ಯಶಸ್ವಿ



• **ಕನ್ನಡಪ್ರಭ ವಾರ್ತೆ** ವಿಜಯಪುರ

ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಎಂ.ಬಿ.ಪಾಟೀಲ ಅವರು ನೀರಾವರಿ ಯೋಜನೆಗಳ ಮೂಲಕ ತಿಕೋಟಾ ತಾಲೂಕಿನ ರೈತರಿಗೆ ಕೃಷ್ಣಾ ನೀರನ್ನು ಒದಗಿಸಿದ್ದಾರೆ. ಅಷ್ಟೇ ಅಲ್ಲದೆ, ಜಿಲ್ಲೆಯಾದ್ಯಂತ ಕೋಟ್ಯಂತರ ಗಿಡಗಳನ್ನು ನೆಡುವ ಮೂಲಕ ಪರಿಸರ ಕಾಳಜಿ ಮೆರೆದಿದ್ದಾರೆ ಎಂದು ನಿವೃತ್ತ ಪ್ರಾಧ್ಯಾಪಕ ಪ್ರೊ.ಮಲ್ಲಿಕಾರ್ಜುನ ಯಾದವೆ ಹೇಳಿದರು.

ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ. ಕಲಾ ಮತ್ತು ಕೆ.ಸಿ.ಪಿ. ವಿಜ್ಞಾನ ಮಹಾವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದಿಂದ ತಿಕೋಟಾ ತಾಲೂಕಿನ ತಾಜಪುರ ಗ್ರಾಮದಲ್ಲಿ ಆಯೋಜಿಸಿದ್ದ ಬೃಹತ್ ಮಣ್ಣು ಮತ್ತು ನೀರು ವಿಶ್ಲೇಷಣೆ ಶಿಬಿರದದಲ್ಲಿ ಮಾತನಾಡಿದರು.

ಜಿಲ್ಲೆಯಲ್ಲಿ ನೀರಾವರಿಯಾದ ಫಲವಾಗಿ ಉತ್ತರ ಕರ್ನಾಟಕದ ಇತರ ಜಿಲ್ಲೆಗಳಿಗೆ ಹೋಲಿಸಿದರೆ ವಿಜಯಪುರದಲ್ಲಿ ಬೇಸಿಗೆಯ ತಾಪಮಾನವು 2 ಡಿಗ್ರಿಯಷ್ಟು ಕಡಿಮೆಯಾಗಿದೆ. ಬಿ.ಎಲ್.ಡಿ.ಇ ಸಂಸ್ಥೆಯು ಕೇವಲ ಶಿಕ್ಷಣಕ್ಕೆ ಸೀಮಿತವಾಗದೆ ಆರೋಗ್ಯ ತಪಾಸಣೆ ಹಾಗೂ ಇಂತಹ ಕೃಷಿ ಪೂರಕ ಶಿಬಿರಗಳ ಮೂಲಕ ಸಾಮಾಜಿಕ ಸೇವೆಯಲ್ಲಿ ತೊಡಗಿರುವುದು ಶ್ಲಾಘನೀಯ ಎಂದರು. ಗ್ರಾಮದ ರೈತರಿಂದ ಸಂಗ್ರಹಿಸಲ್ಪಟ್ಟ ಒಟ್ಟು 72 ಮಣ್ಣಿನ ವಿವಿಧ ಮಾದರಿಗಳು ಮತ್ತು 54 ನೀರಿನ ಮಾದರಿಗಳನ್ನು ವೈಜ್ಞಾನಿಕವಾಗಿ ವಿಶ್ಲೇಷಿಸಿದರು. ವಿದ್ಯಾರ್ಥಿಗಳು ವಿಶ್ಲೇಷಣಾ ವರದಿಯನ್ನು ರೈತರಿಗೆ ಹಸ್ತಾಂತರಿಸಿ ಕೃಷಿ ಭೂಮಿಯ ಗುಣಮಟ್ಟ ಹಾಗೂ ನೀರಿನ ಬಳಕೆಯ ಬಗ್ಗೆ ಮಹತ್ವದ ಬಗ್ಗೆ ಮಾಹಿತಿ ನೀಡಿದರು. ನಿವೃತ್ತ ಶಿಕ್ಷಕ ಸಿದ್ದಪ್ಪ ಯಾರನಾಳ, ಪಿಡಿಒ ಉಮೇಶ ಕನಮಡಿ, ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಎಸ್.ಡಿ.ಲಮಾಣಿ, ಆರ್‌ಡಿ ಸಂಯೋಜಕ ಡಾ.ಕೆ.ಮಹೇಶಕುಮಾರ, ಸ್ನಾತಕೋತ್ತರ ವಿಭಾಗದ ಸಂಯೋಜಕ ಡಾ.ಎಸ್.ಎನ್. ಉಣಕಿ, ಡಾ.ಅನಿಲ ಪಾಟೀಲ, ವಿನೋದ, ವಿದ್ಯಾ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.